ಸಂಪುಟ : 11 ಸಂಚಿಕೆ: 14 ಪುಟ : 4+2 ಬೆಲೆ: 3.00 ಮಂಗಳವಾರ ಫೆಬ್ರವರಿ 10 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 14 Pages : 4+2 Price : 3.00 Tuesday February 10 2026 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25

### ಕಂದಾಯ ಇಲಾಖೆ ಪ್ರಗತಿ ಪರಿಶೀಲನೆ ನಡೆಸಿದ ಸಚಿವ ಕೃಷ್ಣ ಬೈರೇಗೌಡ

## ಕಂದಾಯ ಇಲಾಖೆ ಸಂಪೂರ್ಣ ಡಿಜಿಟಲೀಕರಣಗೊಳ್ಳಬೇಕು

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲೆಯಲ್ಲಿ ಪೌತಿ ಆ್ಯಪ್ ಮೂಲಕ ಪೈಲೆಟ್ ಯೋಜನೆ ಜಾರಿಯಲ್ಲಿದ್ದು, ಇದರ ಪ್ರಗತಿ ಇನ್ನಷ್ಟು ಹೆಚ್ಚಿಸಬೇಕು. ಕಂದಾಯ ಇಲಾಖೆ ಸಂಪೂರ್ಣ ಡಿಜಿಟಲೀಕರಣಗೊಳ್ಳಬೇಕು ಮತ್ತು ಈ ಪ್ರಕ್ರಿಯೆ ಮಾರ್ಚ್ ಅಂತ್ಯದೊಳಗೆ ಪೂರ್ಣಗೊಳ್ಳಬೇಕು ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ತಿಳಿಸಿದರು.

ಅವರು ಗದಗ ಜಿಲ್ಲಾ ಕಂದಾಯ ಇಲಾಖೆಯ ಪ್ರಗತಿ ಪರಿಶೀಲನಾ ಸಭೆ ನಡೆಸಿ ವಿವಿಧ ಯೋಜನೆಗಳ ಅನುಷ್ಠಾನಕ್ಕೆ ವೇಗ ನೀಡುವಂತೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿ ಮಾತನಾಡಿದರು.

ಮುಂದಿನ ವರ್ಷದಿಂದ ಜಮಾಬಂದಿ ಕಾರ್ಯವೂ ಆನ್‌ಲೈನ್ ಮೂಲಕ ಜಾರಿಯಾಗಲಿದ್ದು, ಇದಕ್ಕಾಗಿ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಪೂರ್ವಸಿದ್ಧತೆ ಕೈಗೊಳ್ಳಬೇಕು. ಸರ್ವೇ ಕಾರ್ಯವನ್ನು ಸಂಪೂರ್ಣ ಕಾಗದರಹಿತಗೊಳಿಸುವುದು ಸರ್ಕಾರದ ಬದ್ಧತೆ. ಇನ್ನು ಮುಂದೆ ಸರ್ವೇ ಸ್ಕೆಚ್‌ಗಳು ಡಿಜಿಟಲ್ ರೂಪದಲ್ಲೇ ಇರಬೇಕು ಎಂದು ಸೂಚಿಸಿದರು.

ದಾಖಲೆಗಳ ಸ್ಕ್ಯಾನಿಂಗ್ ಮತ್ತು ಅಪ್ಲೋಡ್ ಕಾರ್ಯ ಶೇ.48ರಷ್ಟು ಮಾತ್ರ ಪೂರ್ಣಗೊಂಡಿರುವುದರಿಂದ ಅದನ್ನು ವೇಗಗೊಳಿಸಬೇಕು. ಪೌತಿ ಕಾರ್ಯ, ಭೂ ಸುರಕ್ಷಾ ಯೋಜನೆ, ಲ್ಯಾಂಡ್ ಬೀಟ್, ಜಮಾಬಂದಿ, ಹಿಡುವಳಿ ಜಮೀನು ಪೋಡಿ ಕಾರ್ಯಗಳಿಗೆ ಹೆಚ್ಚಿನ ಆದ್ಯತೆ ನೀಡಬೇಕು. ಉತಾರ ಸೇರಿ ಎಲ್ಲ ದಾಖಲೆಗಳು ನಾಗರಿಕರಿಗೆ ಸುಲಭವಾಗಿ ಲಭ್ಯವಾಗುವ ವ್ಯವಸ್ಥೆ ಮಾಡಬೇಕು ಎಂದು ಸಚಿವರು ತಿಳಿಸಿದರು.



ಕಂದಾಯ ಗ್ರಾಮಗಳ ಪ್ರಸ್ತಾವನೆ ಸಲ್ಲಿಕೆಗೆ ಮಾರ್ಚ್ 16 ಕೊನೆಯ ದಿನವಾಗಿದ್ದು, ಅದರೊಳಗೆ ಎಲ್ಲಾ ಪ್ರಸ್ತಾವನೆಗಳನ್ನು ಸಲ್ಲಿಸುವಂತೆ ಸಚಿವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ ಮಾತನಾಡಿ, ಗ್ರಾಮ ಲೆಕ್ಕಾಧಿಕಾರಿಗಳು ಕಚೇರಿಯಲ್ಲಿ ಜನರಿಗೆ ಎಲ್ಲಾ ಸೇವೆಗಳು ಸರಿಯಾಗಿ ಲಭ್ಯವಾಗಬೇಕು. ಈಗಾಗಲೇ ಅವರಿಗೆ ಪ್ರತ್ಯೇಕ ಕಚೇರಿಗಳನ್ನು ಗುರುತಿಸಿ ನೀಡಲಾಗಿದೆ. ಆದರೂ ಗ್ರಾಮ ಲೆಕ್ಕಾಧಿಕಾರಿಗಳು ಲಭ್ಯವಾಗುತ್ತಿಲ್ಲ ಎಂಬ ದೂರುಗಳು ಬರುತ್ತಿವೆ ಎಂದು ಹೇಳಿದರು. ಇದಕ್ಕೆ ಪ್ರತಿಕ್ರಿಯಿಸಿದ ಸಚಿವ ಕೃಷ್ಣ ಬೈರೇಗೌಡ, ಇಂತಹ ಪರಿಸ್ಥಿತಿ ಮರುಕಳಿಸದಂತೆ ಜಿಲ್ಲಾಧಿಕಾರಿಗಳು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು.

ವಿಧಾನ ಪರಿಷತ್ ಸದಸ್ಯ ಪ್ರೊ. ಎಸ್.ವಿ. ಸಂಕನೂರು ಮಾತನಾಡಿ, ರಾಜ್ಯದ 43 ಇಲಾಖೆಗಳಲ್ಲಿ ಕೇವಲ 3–4 ಇಲಾಖೆಗಳು ಮಾತ್ರ ಉತ್ತಮವಾಗಿ ಕಾರ್ಯ ನಿರ್ವಹಿಸುತ್ತಿವೆ ಎಂಬ ವರದಿಯಲ್ಲಿ ಕಂದಾಯ ಇಲಾಖೆಯೂ ಒಂದು ಎಂದು ಉಲ್ಲೇಖವಾಗಿದೆ. ಕಂದಾಯ ಸಚಿವರ ಕ್ರಿಯಾಶೀಲ ಕಾರ್ಯದಿಂದ ಇದು ಸಾಧ್ಯವಾಗಿದೆ. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಡಿಜಿಟಲ್ ಇಂಡಿಯಾ ಕಾರ್ಯಕ್ರಮಕ್ಕೆ ಪೂರಕವಾಗಿ ಕಂದಾಯ ಇಲಾಖೆಯ ಡಿಜಿಟಲೀಕರಣ ಉತ್ತಮ ಹೆಜ್ಜೆಯಾಗಿದ್ದು ಅಭಿನಂದನೀಯ ಎಂದು ಹೇಳಿದರು.

ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಕಂದಾಯ ಇಲಾಖೆಯ ವಿವಿಧ ಯೋಜನೆಗಳ ಕುರಿತು ಸಭೆಗೆ ಅಂಕಿ–ಅಂಶಗಳೊಂದಿಗೆ ಪ್ರಗತಿ ವಿವರಿಸಿದರು. ಪ್ರಗತಿ ಸಾಧಿಸದಿರುವ ಯೋಜನೆಗಳಲ್ಲಿನ ಅಡಚಣೆಗಳ ಬಗ್ಗೆ ಸಚಿವರ ಗಮನ ಸೆಳೆದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್, ಡಿಡಿಎಲ್‌ಆರ್ ರುದ್ರಣ್ಣಗೌಡ ಜಿ.ಜೆ, ಎಸಿ ಗಂಗಪ್ಪ ಎಂ, ತಾಲೂಕು ತಹಸೀಲ್ದಾರರು, ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು, ಕಂದಾಯ ನಿರೀಕ್ಷಕರು ಹಾಗೂ ಗ್ರಾಮ ಲೆಕ್ಕಾಧಿಕಾರಿಗಳು ಉಪಸ್ಥಿತರಿದ್ದರು.

> ಗದಗ ಜಿಲ್ಲೆಯಲ್ಲಿ ಆಧಾರ್ ಸೀಡಿಂಗ್ ಕಾರ್ಯ ಶೇ. 85.62ರಷ್ಟು ಪೂರ್ಣಗೊಂಡಿದ್ದು, ಶೀಘ್ರದಲ್ಲೇ ಶೇ.100 ಪ್ರಗತಿ ಸಾಧಿಸಲು ಕ್ರಮ ಕೈಗೊಳ್ಳಬೇಕು. ಮೃತರ ಹೆಸರಿನಲ್ಲಿರುವ ಜಮೀನುಗಳಿಗೆ ವಿಮೆ ಹಾಗೂ ಪರಿಹಾರ ನೀಡುವ ಸಂದರ್ಭದಲ್ಲಿ ದಾಖಲೆಗಳು ಸರಿಯಾಗಿರುವಂತೆ ಪರಿಶೀಲನೆ ನಡೆಸುವಂತೆ ಸಚಿವ ಕೃಷ್ಣ ಬೈರೇಗೌಡ ನಿರ್ದೇಶನ ನೀಡಿದರು.

### ಕಂದಾಯ ಇಲಾಖೆ ಸಂಪೂರ್ಣ ಡಿಜಿಟಲೀಕರಣಕ್ಕೆ ಸರ್ಕಾರ ಬದ್ಧ: ಸಚಿವ ಕೃಷ್ಣ ಬೈರೇಗೌಡ

## ಹಾವೇರಿಯಲ್ಲಿ 1.10 ಲಕ್ಷ ಹಕ್ಕುಪತ್ರ ವಿತರಣೆ




**■ವಿಜಯಸಾಕ್ಷಿ ಸುದ್ದಿ, ಗದಗ**

ಕಂದಾಯ ಇಲಾಖೆಯನ್ನು ಸಂಪೂರ್ಣ ಡಿಜಿಟಲೀಕರಣಗೊಳಿಸಿ ಸಾರ್ವಜನಿಕರಿಗೆ ಪಾರದರ್ಶಕ ಸೇವೆ ಒದಗಿಸುವುದು ಸರ್ಕಾರದ ಗುರಿಯಾಗಿದ್ದು, ಇದರಿಂದ ಮಧ್ಯವರ್ತಿಗಳ ಹಾವಳಿಗೆ ಕಡಿವಾಣ ಬೀಳಲಿದೆ ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ಹೇಳಿದರು.

ನಗರದ ಜಿಲ್ಲಾಧಿಕಾರಿ ಕಚೇರಿಯಲ್ಲಿ ಸೋಮವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಮ್ಮ ಸರ್ಕಾರ ಅಧಿಕಾರಕ್ಕೆ ಬರುವ ಮುನ್ನ ರಾಜ್ಯದ ತಹಸೀಲ್ದಾರ್ ಕಚೇರಿಗಳಲ್ಲಿ 10,774 ಅವಧಿ ಮೀರಿದ ಪ್ರಕರಣಗಳಿದ್ದವು. ವಿಶೇಷ ಅಭಿಯಾನ ಹಮ್ಮಿಕೊಂಡು ಅವುಗಳನ್ನು ವಿಲೇವಾರಿ ಮಾಡಲಾಗಿದ್ದು, ಸದ್ಯ 478 ಪ್ರಕರಣಗಳು ಮಾತ್ರ ಬಾಕಿ ಉಳಿದಿವೆ. ಅವುಗಳನ್ನೂ ಶೀಘ್ರ ಇತ್ಯರ್ಥಗೊಳಿಸಲು ಸೂಚನೆ ನೀಡಲಾಗಿದೆ ಎಂದರು.

ಎ.ಸಿ ನ್ಯಾಯಾಲಯಗಳಲ್ಲಿ 73,624 ಅವಧಿ ಮೀರಿದ ಪ್ರಕರಣಗಳಿದ್ದರೆ, ಈಗ ಅವು 11,605ಕ್ಕೆ ಇಳಿದಿವೆ. ಐದು ವರ್ಷಕ್ಕಿಂತ ಹೆಚ್ಚು ಕಾಲ ಬಾಕಿ ಇದ್ದ 32,782 ಪ್ರಕರಣಗಳಲ್ಲಿ ಕೇವಲ 3,155 ಮಾತ್ರ ಉಳಿದಿದ್ದು, ಮುಂದಿನ ಎರಡು ತಿಂಗಳಲ್ಲಿ ಇವುಗಳನ್ನು ಇತ್ಯರ್ಥಗೊಳಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ ಎಂದು ತಿಳಿಸಿದರು.

ಬಗರ್ ಹುಕುಂ ರೈತರ ಜಮೀನುಗಳ ಸರ್ವೇ ಮತ್ತು ಆರ್.ಟಿ.ಸಿ ಸಮಸ್ಯೆ ನಿವಾರಣೆಗೆ 'ನನ್ನ ಭೂಮಿ ಅಭಿಯಾನ' ಆರಂಭಿಸಲಾಗಿದೆ. 2013–18ರ ಅವಧಿಯಲ್ಲಿ 5,842 ಪೋಡಿ ದುರಸ್ತಿ ಆಗಿದ್ದರೆ, 2018–23ರಲ್ಲಿ 8,500 ಪ್ರಕರಣಗಳು ವಿಲೇವಾರಿಯಾಗಿವೆ. ಜನವರಿ 2025ರಿಂದ ಆರಂಭವಾದ ಅಭಿಯಾನದಡಿ ಸದ್ಯ ರಾಜ್ಯಾದ್ಯಂತ 1,93,615 ಪ್ರಕರಣಗಳಲ್ಲಿ ಸರ್ವೇ ಮತ್ತು ಪೋಡಿ ದುರಸ್ತಿ ನಡೆಯುತ್ತಿದೆ. ಅಧಿಕಾರಿಗಳು ಮನೆಬಾಗಿಲಿಗೆ ತೆರಳಿ ಸೇವೆ ನೀಡುತ್ತಿರುವುದು ಸರ್ಕಾರದ ಬದ್ಧತೆಯ ಕಾರ್ಯ ಎಂದರು.

ತಾಂಡಾ ಹಾಗೂ ಹಟ್ಟಿಗಳ ದಾಖಲೆ ರಹಿತ ವಸತಿ ಪ್ರದೇಶಗಳನ್ನು ಕಂದಾಯ ಗ್ರಾಮಗಳನ್ನಾಗಿ ಪರಿವರ್ತಿಸುವ ಕ್ರಮದಡಿ ಹಿಂದಿನ ಆರು ವರ್ಷಗಳಲ್ಲಿ ಒಂದು ಲಕ್ಷ ಹಕ್ಕುಪತ್ರ ವಿತರಿಸಲಾಗಿತ್ತು. ನಮ್ಮ ಸರ್ಕಾರದ ಎರಡೂವರೆ ವರ್ಷದ ಅವಧಿಯಲ್ಲಿ 1.10 ▸▸3ನೇ ಪುಟಕ್ಕೆ

> ಹಳೆ ದಾಖಲೆಗಳ ನಕಲಿ ತಡೆಗಟ್ಟಲು 'ಭೂಸುರಕ್ಷಾ' ಯೋಜನೆಯಡಿ 64 ಲಕ್ಷಕ್ಕೂ ಹೆಚ್ಚು ಪುಟಗಳನ್ನು ಸ್ಕ್ಯಾನ್ ಮಾಡಲಾಗಿದೆ. ಸಾರ್ವಜನಿಕರು ಆನ್‌ಲೈನ್‌ನಲ್ಲೇ ಕಂದಾಯ ದಾಖಲೆಗಳನ್ನು ಪಡೆಯುವ ವ್ಯವಸ್ಥೆ ಮಾಡಲಾಗಿದ್ದು, ಇದರಿಂದ ಮಧ್ಯವರ್ತಿಗಳ ಹಾವಳಿ ತಪ್ಪಲಿದೆ. ಭೂಮಿಯ ಮಾಲಿಕತ್ವಕ್ಕೆ ಗ್ಯಾರಂಟಿ ನೀಡುವ ಉದ್ದೇಶದಿಂದ ಯೋಜನೆ ಜಾರಿಗೆ ತರಲಾಗಿದೆ. ಗ್ರಾಮ ಲೆಕ್ಕಾಧಿಕಾರಿಗಳಿಗೆ 5 ಸಾವಿರ ಲ್ಯಾಪ್‌ಟಾಪ್‌ಗಳನ್ನು ವಿತರಿಸಿದ್ದು, ಅತ್ಯಾಧುನಿಕ ಸರ್ವೇ ಉಪಕರಣಗಳನ್ನು ಕೂಡ ಒದಗಿಸಲಾಗಿದೆ ಎಂದು ಸಚಿವರ ಕೃಷ್ಣ ಬೈರೇಗೌಡ ವಿವರಿಸಿದರು.

### ಸಹಕಾರಿ ರಂಗದ ಭೀಷ್ಮ ಕೆ.ಎಚ್. ಪಾಟೀಲರ 34ನೇ ಪುಣ್ಯಸ್ಮರಣೋತ್ಸವ

## ಕೆ.ಎಚ್. ಪಾಟೀಲರ ಕೊಡುಗೆಗಳ ಸ್ಮರಣೆ



**■ವಿಜಯಸಾಕ್ಷಿ ಸುದ್ದಿ, ಗದಗ**

ಸಹಕಾರಿ ರಂಗದ ಭೀಷ್ಮ ಎಂದೇ ಖ್ಯಾತರಾಗಿದ್ದ ಮಾಜಿ ಸಚಿವ ದಿ. ಕೆ.ಎಚ್. ಪಾಟೀಲರ ಪುಣ್ಯಸ್ಮರಣೆಯನ್ನು ಸೋಮವಾರ ನಗರದ ದಿ. ಗದಗ ಕೋ–ಆಪ್ ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿ ಅತ್ಯಂತ ಭಕ್ತಿ–ಗೌರವಗಳೊಂದಿಗೆ ಆಚರಿಸಲಾಯಿತು.

ಕಾನೂನು ಹಾಗೂ ಪ್ರವಾಸೋದ್ಯಮ ಸಚಿವ ಎಚ್.ಕೆ. ಪಾಟೀಲರು ದಿ. ಕೆ.ಎಚ್. ಪಾಟೀಲರ ಭವ್ಯ ಪ್ರತಿಮೆ ▸▸2ನೇ ಪುಟಕ್ಕೆ

> ವಿವಿಧ ಇಲಾಖೆಗಳಲ್ಲಿ ನೈಪುಣ್ಯತೆಯನ್ನು ಕೆ.ಎಚ್. ಪಾಟೀಲರು ಹೊಂದಿದ್ದರು. ಅಂದು ಗದಗ–ಬೆಟಗೇರಿಯಲ್ಲಿ ನೀರಿನ ಸಮಸ್ಯೆ ಸಾಕಷ್ಟು ತಲೆದೋರಿತ್ತು. ಆ ನೀರಿನ ಸಮಸ್ಯೆಯನ್ನು ಬಗೆಹರಿಸಿ ನೀರಾವರಿ ಭೀಷ್ಮ ಎಂದೇ ಕರೆಯಿಸಿಕೊಂಡರು. ಶಿಕ್ಷಣ ಕ್ಷೇತ್ರದಲ್ಲಿಯೂ ಅಷ್ಟೇ ವಿಶೇಷ ಆಸಕ್ತಿಯನ್ನು ದಿ. ಕೆ.ಎಚ್. ಪಾಟೀಲರು ಹೊಂದಿದ್ದರು. ಹಲವಾರು ಶಿಕ್ಷಣ ಸಂಸ್ಥೆಗಳನ್ನು ತೆರೆಯುವ ಮೂಲಕ ಶಿಕ್ಷಣ ಕ್ಷೇತ್ರದಲ್ಲಿ ದೊಡ್ಡ ಕ್ರಾಂತಿ ಮಾಡಿದ್ದರು ಎನ್ನುವುದನ್ನು ಅವರ ಪುಣ್ಯ ಸ್ಮರಣೆಯ ದಿನದಂದು ನಾವು ಸ್ಮರಿಸಿಕೊಳ್ಳುವ ಅವಶ್ಯಕತೆ ಇದೆ ಎಂದು ಸಚಿವ ಎಚ್.ಕೆ. ಪಾಟೀಲ ನುಡಿದರು.

### ಹೊಸಳ್ಳಿ ಸಹಕಾರಿ ಸಂಘದ ಚುನಾವಣೆಯಲ್ಲಿ ಜಯ ಗಳಿಸಿದ ಕಾಂಗ್ರೆಸ್ ಬೆಂಬಲಿತ ಸದಸ್ಯರಿಗೆ ಸತ್ಕಾರ

## ರೈತರ ಹಿತ ಕಾಯುವುದು ಸಹಕಾರಿಗಳ ಕರ್ತವ್ಯ

**■ವಿಜಯಸಾಕ್ಷಿ ಸುದ್ದಿ, ರೋಣ**

ರೈತರ ಹಿತವನ್ನು ಬಯಸುವುದು ಸಹಕಾರಿ ಸಂಘಗಳ ಆದ್ಯ ಕರ್ತವ್ಯವಾಗಿದ್ದು, ನೂತನವಾಗಿ ಆಯ್ಕೆಯಾದ ಸದಸ್ಯರು ಇದನ್ನು ಅರಿತು ತಮ್ಮ ಕೆಲಸ ನಿರ್ವಹಿಸಬೇಕು ಎಂದು ರಾಜ್ಯ ಖನಿಜ ನಿಗಮದ ಅಧ್ಯಕ್ಷರು, ಶಾಸಕರಾದ ಜಿ.ಎಸ್. ಪಾಟೀಲ ಹೇಳಿದರು.

ಅವರು ರವಿವಾರ ಸಂಜೆ ತಮ್ಮ ನಿವಾಸದಲ್ಲಿ ಹೊಸಳ್ಳಿ ಗ್ರಾಮದ ಸಹಕಾರಿ ಕೃಷಿ ಪತ್ತಿನ ಚುನಾವಣೆಯಲ್ಲಿ ಜಯ ಗಳಿಸಿದ ಕಾಂಗ್ರೆಸ್ ಬೆಂಬಲಿತ ಸದಸ್ಯರನ್ನು ಸತ್ಕರಿಸಿ ಮಾತನಾಡಿದರು.

ಸಹಕಾರಿ ಸಂಘಗಳು ಮೊದಲಿನಿಂದಲೂ ರೈತರ ಹಿತಕ್ಕಾಗಿ ಬೆಳೆದು ಬಂದಿರುವ ಸಂಘಗಳು. ಸದಸ್ಯರು ರೈತರ ಬೆಳವಣಿಗೆಯನ್ನು ಬಯಸಿದಾಗ ಮಾತ್ರ ಕೃಷಿ ಪತ್ತಿನ ಸಹಕಾರಿ ಸಂಘ ಬೆಳೆಯಲು ಸಾಧ್ಯವಾಗುತ್ತದೆ. ಮುಖ್ಯವಾಗಿ ಸಹಕಾರಿ ಸಂಘಗಳ ಆರ್ಥಿಕ ಬೆಳವಣಿಗೆಯಲ್ಲಿ ರೈತರ ಪಾಲು ಕೂಡ ಇದ್ದು, ತೆಗೆದುಕೊಂಡ ಸಾಲವನ್ನು ಸಕಾಲಕ್ಕೆ ಮರಳಿಸಬೇಕು. ಇದರಿಂದ ಸಂಘದ ಚೇತರಿಕೆ ಜೊತೆಗೆ ಮತ್ತೆ ಹೆಚ್ಚಿನ ಸಾಲ ಪಡೆಯಲು ಸಹಕಾರಿಯಾಗುತ್ತದೆ ಎಂದರು.

ಕೆಸಿಸಿ ಬ್ಯಾಂಕ್ ಮಾಜಿ ಅಧ್ಯಕ್ಷ ಐ.ಎಸ್. ಪಾಟೀಲ ಮಾತನಾಡಿ, ಗ್ರಾಮೀಣ ಭಾಗಗಳಲ್ಲಿ ರೈತರು ತಮ್ಮ ಕೃಷಿ ಚಟುವಟಿಕೆಗಳ ಬಲವರ್ಧನೆಗೊಳಿಸಲು ಸಹಕಾರಿ ಸಂಘಗಳತ್ತ ಅವಲಂಬಿತರಾಗಿರುತ್ತಾರೆ. ಅಲ್ಲದೆ ಗ್ರಾಮದಲ್ಲಿಯೇ ಹಣಕಾಸಿನ ವ್ಯವಹಾರ ನಡೆಯುವುದರಿಂದ ಕೃಷಿ ಚಟುವಟಿಕೆಗಳಲ್ಲಿ ಹೆಚ್ಚಿನ ಸಮಯವನ್ನು ಕಳೆಯುತ್ತಾರೆ. ಈದಿಶೆಯಲ್ಲಿ ಸಹಕಾರಿ ಸಂಘಗಳು ಕೂಡ ರೈತರಿಗೆ ಹೆಚ್ಚಿನ ಸಾಲವನ್ನು ಕೊಡುವ ಜೊತೆಗೆ ಅವರ ಪ್ರಗತಿಗೆ ಕಾರಣವಾಗಬೇಕು ಎಂದರು.

ಸ'ಹ'ಕಾರಿ ▸▸3ನೇ ಪುಟಕ್ಕೆ



### ಹುಲಕೋಟಿ ಕೆ.ಎಚ್. ಪಾಟೀಲ ಆಸ್ಪತ್ರೆಗೆ ಡಾ. ಎಚ್.ಎಸ್. ಬಳ್ಳಾಲ ಭೇಟಿ

## ಅತ್ಯಾಧುನಿಕ ಸುಸಜ್ಜಿತ ಆಸ್ಪತ್ರೆಗೆ ಮೆಚ್ಚುಗೆ



**■ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕದ ಮೊಟ್ಟ ಮೊದಲ 'ಕ್ಯಾಡಾವರ್ ಮೂತ್ರಪಿಂಡ ಕಸಿ' ಮಾಡಿರುವ ಹಾಗೂ ಮಣಿಪಾಲ ಆಸ್ಪತ್ರೆಗಳ ಸಮೂಹದ ಅಧ್ಯಕ್ಷರು, ಖ್ಯಾತ ಮೂತ್ರಪಿಂಡ ತಜ್ಞ ಡಾ. ಎಚ್. ಸುದರ್ಶನ ಬಳ್ಳಾಲ ಅವರು ಹುಲಕೋಟಿಯ ಕೆ.ಎಚ್. ಪಾಟೀಲ ಆಸ್ಪತ್ರೆ ಹಾಗೂ ಸಂಶೋಧನಾ ಸಂಸ್ಥೆಗೆ ಭೇಟಿ ನೀಡಿದರು.

ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರೊಂದಿಗೆ ಡಾ. ಎಚ್. ಸುದರ್ಶನ ಬಳ್ಳಾಲರನ್ನು ಗೌರವಿಸಿ ಅವರೊಂದಿಗೆ ಸಂಸ್ಥೆಯ ಬಗ್ಗೆ ಚರ್ಚಿಸಿದರು.

ಈ ಸಂದರ್ಭದಲ್ಲಿ ಡಾ. ಎಚ್. ಸುದರ್ಶನ ಬಳ್ಳಾಲ, ಇಂತಹ ಗ್ರಾಮೀಣ ಭಾಗದಲ್ಲಿ ಅತ್ಯಾಧುನಿಕ ಸುಸಜ್ಜಿತ ಆಸ್ಪತ್ರೆಯನ್ನು ಕಂಡು ಬಹಳ ಸಂತೋಷ ವ್ಯಕ್ತಪಡಿಸಿದರು.

ದೇಶದಲ್ಲಿಯೇ ಮೊಟ್ಟಮೊದಲು ಹಳ್ಳಿ ಭಾಗದ ಆಸ್ಪತ್ರೆಯಲ್ಲಿ ಮೂತ್ರಪಿಂಡ ಕಸಿ ಶಸ್ತ್ರಚಿಕಿತ್ಸೆ ಆಗಿದೆ ಎಂದರೆ ಅದು ಸಾಮಾನ್ಯ ಕೆಲಸವಲ್ಲ. ಸಂಸ್ಥೆಗೆ ಬೆನ್ನೆಲುಬಾಗಿ ನಿಂತು ಸಹಕಾರ ನೀಡಿದ ಎಚ್.ಕೆ. ಪಾಟೀಲರು ಮತ್ತು ಸಂಸ್ಥೆಯ ಆಡಳಿತ ಮಂಡಳಿಯ ಮಾರ್ಗದರ್ಶನದಿಂದ ಹಾಗೂ ನುರಿತ ತಜ್ಞ ಟ್ರಾನ್ಸ್‌ಪ್ಲಾಂಟ್ ವೈದ್ಯರ ತಂಡದ ಮೂಲಕ ಮೂತ್ರಪಿಂಡ ಕಸಿ ಶಸ್ತ್ರಚಿಕಿತ್ಸೆ ಮಾಡಲು ಸಾಧ್ಯವಾಯಿತು. ಗ್ರಾಮೀಣ ಜನರಿಗೆ ಇನ್ನೂ ಹೆಚ್ಚು ವೈದ್ಯಕೀಯ ಸೇವೆಯು ಈ ಆಸ್ಪತ್ರೆಯಿಂದ ಸಿಗಲಿ ಎಂದು ಹಾರೈಸಿದರು.

ಸಂಸ್ಥೆಯ ಅಧ್ಯಕ್ಷ ಡಾ. ಎಸ್. ಆರ್. ನಾಗನೂರ ಮತ್ತು ಗೌರವ ಕಾರ್ಯದರ್ಶಿ ಡಾ. ವೇಮನ್ ಆರ್. ಸಾವುಕಾರ ಸ್ವಾಗತಿಸಿದರು. ಡಾ. ಅವಿನಾಶ ಓದುಗೌಡರ, ಡಾ. ಪವನಕುಮಾರ ಕೋಳಿವಾಡ, ಡಾ. ಸಂಜೀವ ಚಿಂತಾಮಣಿ, ಡಾ. ಜಗದೀಶ ಗಡ್ಡೆಪ್ಪನವರ, ಡಾ. ದೀಪಕ ಕುರಹಟ್ಟಿ, ಡಾ. ಸವಿತಾ ಹೊಂಬಾಳಿ, ಶ್ರೀ ಕೃಷ್ಣರೆಡ್ಡಿ ಹೂಲಿ, ಡಾ. ವಿಕ್ರಮ ಪಾಟೀಲ, ಡಾ. ಪ್ರಭು ಮಡಿವಾಳರ, ಆರ್.ಆರ್. ಓದುಗೌಡರ, ಲತೀಫ ಕುನ್ನಿಭಾವಿ ಉಪಸ್ಥಿತರಿದ್ದರು.

> ಡಾ. ಅವಿನಾಶ ಓದುಗೌಡರ ಮಾತನಾಡಿ, ಆಸ್ಪತ್ರೆಯಲ್ಲಿ ಯಶಸ್ವಿಯಾಗಿ ನಡೆದ 12 ಮೂತ್ರಪಿಂಡ ಕಸಿ ಶಸ್ತ್ರಚಿಕಿತ್ಸೆಗಳ ವಿವರಣೆಯನ್ನು ನೀಡಿದರು. ಮೂತ್ರಪಿಂಡ ಕಸಿ ಶಸ್ತ್ರಚಿಕಿತ್ಸೆಯಾದ ಫಲಾನುಭವಿಯನ್ನು ಭೇಟಿ ಮಾಡಿ ಅವರ ಜೊತೆ ಚರ್ಚಿಸಿ, ಅವರ ಆರೋಗ್ಯದ ಬಗ್ಗೆ ವಿಚಾರಿಸಿ ಸಂತೋಷ ವ್ಯಕ್ತಪಡಿಸಿದರು.

# ರಾಧಿಕಾ ಮೂಡಲಗಿಗೆ ಪಿಎಚ್‌ಡಿ ಪದವಿ



■ವಿಜಯಸಾಕ್ಷಿ ಸುದ್ದಿ, ಗದಗ

ಅನ್ವಯಿಕ ಅನುವಂಶಶಾಸ್ತ್ರ ವಿಷಯದ ಕುರಿತು ನಗರದ ರಾಧಿಕಾ ಕಿಶೋರ್ ಮೂಡಲಗಿ ಅವರು 'ಮಾಲ್ಯುಕುಲರ್ ಕ್ಯಾರಕ್ಟರೈಜೇಷನ್ ಅಂಡ್ ಅ ಪ್ರೈಮರ್ ಸೆಲೆಕ್ಷನ್ ಫಾರ್ ಐಡೆಂಟಿಫಿಕೇಶನ್ ಆಫ್ ಅಸಿನೆಟೊಬ್ಯಾಕ್ಟರ್ ಬೌಮನಿ' ಪ್ರಬಂಧ ಮಂಡಿಸಿದ ಹಿನ್ನೆಲೆಯಲ್ಲಿ ಧಾರವಾಡದ ಕರ್ನಾಟಕ ವಿವಿಯು ಡಾಕ್ಟರ್ ಆಫ್ ಫಿಲಾಸಾಫಿ ಪಿಎಚ್‌ಡಿ ಪದವಿ ಘೋಷಿಸಿದೆ. ಕರ್ನಾಟಕ ವಿವಿಯ ಸ್ನಾತಕೋತ್ತರ ಅನ್ವಯಿಕ ಅನುವಂಶಶಾಸ್ತ್ರ ಅಧ್ಯಯನ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಡಾ. ಸುರೇಶ ಬಿ.ಅರಕೇರಾ ಅವರು ಮಾರ್ಗದರ್ಶನ ನೀಡಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

# ಫೆ.13ರಂದು ಜಿಲ್ಲಾ ಮಟ್ಟದ ಗ್ರಾಹಕರ ವಿಶೇಷ ಕುಂದುಕೊರತೆ ಆಲಿಕೆ ಸಭೆ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಮಟ್ಟದ ಗ್ರಾಹಕರ ವಿಶೇಷ ಕುಂದುಕೊರತೆ ಆಲಿಕೆ ಸಭೆಯನ್ನು ಫೆಬ್ರವರಿ 13ರಂದು ಬೆಳಿಗ್ಗೆ 11 ಗಂಟೆಗೆ ಆಯೋಜಿಸಲಾಗಿದೆ. ಈ ಸಭೆ ಅಧೀಕ್ಷಕ ಇಂಜಿನಿಯರ್ (ವಿ), ಕಾರ್ಯ ಮತ್ತು ಪಾಲನಾ ವೃತ್ತ, ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ (ಹು.ವಿ.ಸ.ಕಂ.ನಿ), ಕೈಗಾರಿಕಾ ಪ್ರದೇಶ, ಹುಬ್ಬಳ್ಳಿ ರಸ್ತೆ, ಗದಗ ಕಚೇರಿಯಲ್ಲಿ ನಡೆಯಲಿದೆ.

ಗದಗ ಜಿಲ್ಲೆಯ ಎಲ್ಲಾ ವಿದ್ಯುತ್ ಗ್ರಾಹಕರು ಸಭೆಯಲ್ಲಿ ಭಾಗವಹಿಸಿ, ಹು.ವಿ.ಸ.ಕಂ.ನಿ ಇಲಾಖೆಗೆ ಸಂಬಂಧಿಸಿದ ತಮ್ಮ ಕುಂದುಕೊರತೆಗಳನ್ನು ಲಿಖಿತವಾಗಿ ಅಥವಾ ಖುದ್ದಾಗಿ ಹಾಜರಾಗಿ ಸಲ್ಲಿಸಬಹುದು ಎಂದು ಅಧೀಕ್ಷಕ ಇಂಜಿನಿಯರ್ (ವಿ) ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಫೆ. 13ಕ್ಕೆ ಬೈಕ್ ರ್ಯಾಲಿ, ಶೋಭಾಯಾತ್ರೆ, ಸಾರ್ವಜನಿಕ ಸಮಾರಂಭ

# ಸನಾತನ ಧರ್ಮದ ಉಳಿವಿಗಾಗಿ ಶೋಭಾಯಾತ್ರೆ



■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಹಿಂದೂ ಸಮ್ಮೇಳನ ಸಮಿತಿ ಗಜೇಂದ್ರಗಡ ವತಿಯಿಂದ ಫೆಬ್ರವರಿ 14ರಂದು ನಡೆಯಲಿರುವ ಅದ್ದೂರಿ ಹಿಂದೂ ಸಮ್ಮೇಳನದ ಹಿನ್ನೆಲೆಯಲ್ಲಿ ಪಟ್ಟಣದ ಪ್ರವಾಸಿ ಮಂದಿರದಲ್ಲಿ ರವಿವಾರ ಪತ್ರಿಕಾಗೋಷ್ಠಿ ನಡೆಯಿತು.

ಸಭೆಯ ಅಧ್ಯಕ್ಷತೆ ವಹಿಸಿದ್ದ ರವಿ ಶಿಂಗ್ರಿ ಮಾತನಾಡಿ, ಗಜೇಂದ್ರಗಡ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಸಮಸ್ತ ಹಿಂದೂ ಬಾಂಧವರ ಸಹಯೋಗದೊಂದಿಗೆ ಹಿಂದೂ ಸಮ್ಮೇಳನವನ್ನು ಆಯೋಜಿಸಲಾಗಿದ್ದು, ಸನಾತನ ಧರ್ಮದ ಆಚಾರ-ವಿಚಾರಗಳ ಉಳಿವು ಮತ್ತು ಬೆಳೆವಣಿಗೆ ಈ ಸಮ್ಮೇಳನದ ಮುಖ್ಯ ಉದ್ದೇಶವಾಗಿದೆ ಎಂದರು.

ಕಾರ್ಯಕ್ರಮದ ವಿವರ ನೀಡಿದ ಅವರು, ಫೆಬ್ರವರಿ 13ರಂದು ಮುಂಜಾನೆ 10 ಗಂಟೆಗೆ ಶ್ರೀ ಜಗದಂಬಾ ದೇವಸ್ಥಾನದಿಂದ ನಗರದ ಪ್ರಮುಖ ರಸ್ತೆಗಳಲ್ಲಿ ಬೈಕ್ ರ್ಯಾಲಿ ನಡೆಯಲಿದೆ. ಫೆಬ್ರವರಿ 14ರಂದು ಮಧ್ಯಾಹ್ನ 2.30ಕ್ಕೆ ಭಜರಂಗದಳ ಸರ್ಕಲ್‌ನಿಂದ ಸಾಂಪ್ರದಾಯಿಕ ಮಂಗಳ ಶೋಭಾಯಾತ್ರೆ ಆರಂಭವಾಗಿ, ವಾದ್ಯಮೇಳಗಳೊಂದಿಗೆ ಸಂಜೆ 5.30ಕ್ಕೆ ರೋಣ ರಸ್ತೆಗಿರುವ ಶ್ರೀ ಜಗದ್ಗುರು ತೋಂಟದಾರ್ಯ ಆಂಗ್ಲ ಮಾಧ್ಯಮ (ಸಿ.ಬಿ.ಎಸ್.ಇ) ಶಾಲಾ ಆವರಣದಲ್ಲಿ ಮುಕ್ತಾಯಗೊಳ್ಳಲಿದೆ.

ಬಳಿಕ ಅಲ್ಲಿಯೇ ಸಂಜೆ 5.30ಕ್ಕೆ ಹಿಂದೂ ಸಮ್ಮೇಳನದ ಸಾರ್ವಜನಿಕ ಸಮಾರಂಭ ನಡೆಯಲಿದೆ ಎಂದು ತಿಳಿಸಿದರು.

ಸಮ್ಮೇಳನಕ್ಕೆ ಪರಮಪೂಜ್ಯ ಶ್ರೀ ಡಾ. ವಿಶ್ವನಾಥ ಮಹಾಸ್ವಾಮಿಗಳು (ಹಿರೇಮಠ), ಜಗದ್ಗುರು ಬೂದೀಶ್ವರ ಮಠ, ರೋಣ ಅವರು ದಿವ್ಯ ಸಾನ್ನಿಧ್ಯ ವಹಿಸಲಿದ್ದು, ರಾಷ್ಟ್ರೀಯ ಸ್ವಯಂಸೇವಕ ಸಂಘದ ಕರ್ನಾಟಕ ಉತ್ತರ ಪ್ರಾಂತ ಕಾರ್ಯಕಾರಿಣಿ ಸದಸ್ಯರಾದ ರವೀಂದ್ರ ಅವರು ಮುಖ್ಯ ವಕ್ತಾರರಾಗಿ ಭಾಗವಹಿಸಲಿದ್ದಾರೆ ಎಂದು ಹೇಳಿದರು.

ಉಮೇಶ ಮಲ್ಲಾಪೂರ ಮಾತನಾಡಿ, ಭಾರತ ಉಳಿಯಬೇಕಾದರೆ ಹಿಂದೂ ಸಂಸ್ಕೃತಿ ಉಳಿಯಬೇಕು. ಅದನ್ನು ಉಳಿಸಿ ಬೆಳೆಸುವ ದೃಷ್ಟಿಯಿಂದ ಈ ಸಮ್ಮೇಳನ ಆಯೋಜಿಸಲಾಗಿದೆ ಎಂದು ಹೇಳಿದರು.

ಸಮ್ಮೇಳನದಲ್ಲಿ ದೇಶದ ಆಂತರಿಕ ಸುರಕ್ಷತೆ, ಸಂಘಟನಾ ಕಾರ್ಯ, ಪಂಚ ಪರಿವರ್ತನೆ, ಗ್ರಾಮ ಸುರಕ್ಷೆ, ಸಾಮರಸ್ಯ, ವ್ಯಸನಮುಕ್ತಿ, ಸ್ವಾವಲಂಬನೆ ಮುಂತಾದ ವಿಷಯಗಳ ಕುರಿತು ಚರ್ಚೆ ನಡೆಯಲಿದ್ದು, ಎಲ್ಲ ಸಮಾಜದವರು, ಶಿಕ್ಷಣ ಸಂಸ್ಥೆಗಳ ಆಡಳಿತ ಮಂಡಳಿ, ಸಿಬ್ಬಂದಿ, ವಿದ್ಯಾರ್ಥಿಗಳು, ಮಹಿಳಾ ಸ್ವಸಹಾಯ ಸಂಘಗಳು ಹಾಗೂ ವಿವಿಧ ಸಂಘಟನೆಗಳ ಪದಾಧಿಕಾರಿಗಳು ಭಾಗವಹಿಸುವಂತೆ ವಿನಂತಿಸಲಾಯಿತು.

ಕುಟುಂಬ ಸಮೇತ ಸಾಂಸ್ಕೃತಿಕ ಉಡುಗೆ-ತೊಡುಗೆಗಳಲ್ಲಿ ಭಾಗವಹಿಸುವುದು, ಚಿಕ್ಕ ಮಕ್ಕಳು ಸಾಧು-ಸಂತರ ಹಾಗೂ ಮಹಾಪುರುಷರ ವೇಷಭೂಷಣ ಧರಿಸಿ ಶೋಭಾಯಾತ್ರೆಯಲ್ಲಿ ಪಾಲ್ಗೊಳ್ಳುವುದು, ಕುಲಕಸುಬಿಗೆ ಸಂಬಂಧಿಸಿದ ಮೂರ್ತಿ, ಕಲಾ ಪ್ರದರ್ಶನ, ಕೋಲಾಟ, ಭಜನೆ ಮೂಲಕ ಭಾಗವಹಿಸುವಂತೆ ಮನವಿ ಮಾಡಲಾಯಿತು.

ಪತ್ರಿಕಾಗೋಷ್ಠಿಯಲ್ಲಿ ನಿವೃತ್ತ ಶಿಕ್ಷಕ ಶಿವಳ್ಳಿ, ರವಿ ಕಲಾಲ, ಉಮೇಶ ಮಲ್ಲಾಪೂರ, ರಾಜೇಂದ್ರ ಘೋರ್ಪಡೆ, ಚಂದ್ರಕಾಂತ ಮಹೇಂದ್ರಕರ, ಉಮೇಶ ನಾವಡೆ, ಸಂತೋಷ ವಸ್ತ್ರದ, ಗಣೇಶ ನಾವಡೆ, ನೀಲಪ್ಪ ಗುರಿಕಾರ ಮುಂತಾದವರು ಉಪಸ್ಥಿತರಿದ್ದರು.

ಪ್ರಚಾರ ಸಮಿತಿ ಸದಸ್ಯ ಸಂಜೀವ ಜೋಷಿ ಮಾತನಾಡಿ, ಹಿಂದೂಗಳು ನಾವೆಲ್ಲರೂ ಒಂದು ಎಂಬ ಭಾವನೆಯೊಂದಿಗೆ ಜಾತಿ-ಮತ-ಪಂಥ ಭೇದವಿಲ್ಲದೆ ನಡೆಯುವ ಶ್ರೇಷ್ಠ ಸಮಾವೇಶವೇ ಹಿಂದೂ ಸಮ್ಮೇಳನವಾಗಿದೆ. ಫೆ. 13ರಂದು ಬೈಕ್ ರ್ಯಾಲಿ, ಫೆ. 14ರಂದು ಸಮ್ಮೇಳನದ ಅಂಗವಾಗಿ ಮಜಲು, ಚಂಡೆ ಸೇರಿದಂತೆ ವಿವಿಧ ಸಾಂಪ್ರದಾಯಿಕ ವಾದ್ಯಗಳು, ಆಯಾ ಸಮಾಜದ ವೇಷಭೂಷಣ, ಸಾಧು-ಸಂತರ ಹಾಗೂ ಮಹಾಪುರುಷರ ಭಾವಚಿತ್ರ ಪ್ರದರ್ಶನ ನಡೆಯಲಿದೆ ಎಂದರು.

# ಬಿ.ಡಿ. ತಟ್ಟಿ ಟ್ರಸ್ಟ್‌ಗೆ ರಾಷ್ಟ್ರ ಮಟ್ಟದ ಪ್ರಶಸ್ತಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕಳೆದ 3 ದಶಕಗಳಿಂದ ವಿಕಲಚೇತನ ಕ್ಷೇತ್ರದಲ್ಲಿ ರಾಜ್ಯದಲ್ಲಿಯೇ ವಿಶೇಷ ಕಾರ್ಯ ಮಾಡುತ್ತಾ ಸಾಮಾಜಿಕವಾಗಿ ಸೇವೆ ಸಲ್ಲಿಸುತ್ತಿರುವ ಲಕ್ಷ್ಮೇಶ್ವರದ ಬಿ.ಡಿ. ತಟ್ಟಿ(ಅ) ಮೆಮೋರಿಯಲ್ ಚಾರಿಟೆಬಲ್ ಟ್ರಸ್ಟ್‌ಗೆ ಐಡಿಎಫ್‌ಸಿ ಫಸ್ಟ್ ಬ್ಯಾಂಕ್ ಮತ್ತು ಎನ್‌ಡಿಟಿವಿ ಸಹಯೋಗದಲ್ಲಿ ನೀಡುವ ರಾಷ್ಟ್ರ ಮಟ್ಟದ ಪ್ರಶಸ್ತಿಗೆ ಭಾಜನರಾಗಿದ್ದು ಕರ್ನಾಟಕಕ್ಕೆ ಹೆಮ್ಮೆಯ ಸಂಗತಿಯಾಗಿದೆ. ದೇಶದಲ್ಲಿ ಕರ್ನಾಟದಲ್ಲಿಯೇ ಅಷ್ಟೆ ಅಲ್ಲ, ದಕ್ಷಿಣ ಭಾರತದಲ್ಲಿಯೇ ಏಕೈಕ ಪ್ರಶಸ್ತಿಯಾಗಿರುವದು ವಿಶೇಷವಾಗಿದೆ.

ನವದೆಹಲಿಯಲ್ಲಿ ಇತ್ತೀಚೆಗೆ ಐಡಿಎಫ್‌ಸಿ ಫಸ್ಟ್ ಬ್ಯಾಂಕ್ (IDFC FIRST Bank) ಮತ್ತು ಎನ್‌ಡಿಟಿವಿ (NDTV) ಜೊತೆಗೆ ಸಾಮಾಜಿಕ ಪರಿಣಾಮ ಕಾರ್ಯಕ್ರಮದನ್ವಯ ದೇಶದಾದ್ಯಂತ ಸಾಮಾಜಿಕ ಬದಲಾವಣೆ ತರುವ ಕೆಲಸ ಮಾಡುತ್ತಿರುವ ಹಿನ್ನೆಲೆಯಲ್ಲಿ ಗದಗ ಜಿಲ್ಲೆ ಲಕ್ಷ್ಮೇಶ್ವರದ ಬಿ.ಡಿ. ತಟ್ಟಿ(ಅ) ಮೆಮೋರಿಯಲ್ ಚಾರಿಟೆಬಲ್ ಟ್ರಸ್ಟ್‌ಗೆ ಮಿಷನ್ ಇಂಪ್ಯಾಕ್ಟ್-2026 ಕಾರ್ಯಕ್ರಮದಲ್ಲಿ ಕೇಂದ್ರ ಜಲಶಕ್ತಿ ಸಚಿವ ಸಿ.ಆರ್. ಪಾಟೀಲ ತಟ್ಟಿ ಸಂಸ್ಥೆಯ ಸಂಯೋಜಕ ಸಾಗರ ಪೂಜಾರಿ ಅವರಿಗೆ ಪ್ರಶಸ್ತಿ ಪ್ರದಾನ ಮಾಡಿದರು.

ರಾಷ್ಟ್ರಮಟ್ಟದ ಪ್ರಶಸ್ತಿಗೆ ಬಾಜಿನರಾಗಿರುವ ತಟ್ಟಿ ಸಂಸ್ಥೆಗೆ ಶಾಸಕ ಡಾ. ಚಂದ್ರು ಲಮಾಣಿ, ಮಾಜಿ ಶಾಸಕರುಗಳಾದ ಜಿ.ಎಸ್. ಗಡ್ಡದೇವರಮಠ, ಜಿ.ಎಂ. ಮಹಾಂತಶೆಟ್ಟರ, ರಾಮಣ್ಣ ಲಮಾಣಿ, ರಾಮಕೃಷ್ಣ ದೊಡ್ಡಮನಿ, ಸಂಸ್ಥೆಯ ಅಧ್ಯಕ್ಷ ಡಾ. ಎಸ್.ಜೆ. ತಟ್ಟಿ ಹಾಗೂ ಪದಾಧಿಕಾರಿಗಳು, ಗೌರವ ಕಾರ್ಯದರ್ಶಿ ಎಸ್.ಎಸ್. ಮಹಾಜನಶೆಟ್ಟರ ಅಭಿನಂದಿಸಿದ್ದಾರೆ.

### ಗಳಲೆ ರೋಗದಿಂದ ನೀಲ್ಗಾಯ್ ಸಾವು

# ಗದಗ ಮೃಗಾಲಯದ ಸಸ್ಯಾಹಾರಿ ಪ್ರಾಣಿ ವಿಭಾಗ ವೀಕ್ಷಣೆಗೆ ತಾತ್ಕಾಲಿಕ ನಿರ್ಬಂಧ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಮೃಗಾಲಯದಲ್ಲಿ ಫೆಬ್ರವರಿ 3ರಂದು ಸಂಜೆ 7 ಗಂಟೆ ಸುಮಾರಿಗೆ 3.5 ವರ್ಷದ ನೀಲ್ಗಾಯ್ ಪ್ರಾಣಿ ಗಳಲೆ ರೋಗ (Hemorrhagic Septicemia)ದ ಪರಿಣಾಮವಾಗಿ ಮರಣ ಹೊಂದಿದೆ.

ಈ ರೋಗವು ವೇಗವಾಗಿ ಹರಡುವ ಹಾಗೂ ಪಶು-ಪ್ರಾಣಿಗಳನ್ನು ಸಾಕುವವರಿಂದ ಹರಡುವ ಸಾಧ್ಯತೆ ಇರುವುದರಿಂದ, ಮುನ್ನೆಚ್ಚರಿಕಾ ಕ್ರಮವಾಗಿ ಗದಗ ಮೃಗಾಲಯವು ಸಸ್ಯಾಹಾರಿ ಪ್ರಾಣಿಗಳ ಆವರಣವನ್ನು ತಾತ್ಕಾಲಿಕವಾಗಿ ಬಂದ್ ಮಾಡಿದೆ.

ಕರ್ನಾಟಕ ಮೃಗಾಲಯ ಪ್ರಾಧಿಕಾರದ ಸಲಹೆ ಮೇರೆಗೆ ಆರೋಗ್ಯ ಸಲಹಾ ಸಮಿತಿ ಸಭೆ ನಡೆಸಲಾಗಿದ್ದು, ಗದಗ ಮೃಗಾಲಯದ ಸಸ್ಯಾಹಾರಿ ಪ್ರಾಣಿ ವಿಭಾಗದ ಪ್ರದೇಶವನ್ನು ಒಂದು ವಾರದ ಕಾಲ ವೀಕ್ಷಕರಿಗೆ ತಾತ್ಕಾಲಿಕವಾಗಿ ನಿರ್ಬಂಧಿಸಲಾಗಿದೆ. ಪ್ರಾಣಿಗಳ ಆರೋಗ್ಯ ಹಾಗೂ ಸುರಕ್ಷತೆಯನ್ನು ಕಾಪಾಡುವ ಉದ್ದೇಶದಿಂದ ಈ ಕ್ರಮ ಕೈಗೊಳ್ಳಲಾಗಿದೆ ಎಂದು ಗದಗ ಮೃಗಾಲಯ ಹಾಗೂ ಗದಗ ವಿಭಾಗದ ಉಪ ಸಂರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಇತ್ತೀಚೆಗೆ ನಂಜನಗೂಡಿನಲ್ಲಿ ನಡೆದ 'ಕರ್ನಾಟಕ ಕುಮಾರಿ' ಕುಸ್ತಿ ಪಂದ್ಯಾವಳಿಯಲ್ಲಿ ನರೇಗಲ್ಲ ಪಟ್ಟಣದ ರಾಧಿಕಾ ವಿಶ್ವನಾಥ ತೊಂಡಿಹಾಳ ಬೆಳ್ಳಿ ಗದೆಯನ್ನು ಪಡೆದುಕೊಂಡು, ಹರ್ಯಾಣದಲ್ಲಿ ನಡೆಯಲಿರುವ ರಾಷ್ಟ್ರಮಟ್ಟದ ಕುಸ್ತಿ ಪಂದ್ಯಾವಳಿಗೆ ಆಯ್ಕೆಯಾಗಿದ್ದಾಳೆ. ರಾಧಿಕಾ ತೊಂಡಿಹಾಳ ಪ್ರಸ್ತುತ ಬೆಳಗಾವಿಯ ಕ್ರೀಡಾ ವಸತಿ ಶಾಲೆಯಲ್ಲಿ ದ್ವಿತೀಯ ಪಿಯುಸಿ ಓದುತ್ತಿದ್ದು, ಇವಳಿಗೆ ಸ್ಮಿತಾ ಪಾಟೀಲ ತರಬೇತಿ ನೀಡುತ್ತಿದ್ದಾರೆ.



ಕರ್ನಾಟಕ ರಾಜ್ಯ ಶ್ರೀ ಡಾ. ಪಂ.ಪುಟ್ಟರಾಜ ರೈತ ಸಂಘದ ಸಂಸ್ಥಾಪಕ ರಾಜ್ಯಾಧ್ಯಕ್ಷ ಎಂ.ಪಿ. ಮುಳುಗುಂದ ಅವರ ನೇತೃತ್ವದಲ್ಲಿ 5ನೇ ವರ್ಷದ ವಾರ್ಷಿಕೋತ್ಸವ ಹಾಗೂ ರೈತ ಸಂಭ್ರಮ ಕಾರ್ಯಕ್ರಮದಲ್ಲಿ ಗದುಗಿನ ಶ್ರೀ ತೋಂಟದಾರ್ಯ ಕಲ್ಯಾಣ ಮಂಟಪದಲ್ಲಿ ನಾಡಿನಾದ್ಯಂತ ಸಂಗೀತ ಕಾರ್ಯಕ್ರಮ ನೀಡಿದ್ದಕ್ಕಾಗಿ ಶ್ರೀ ವೀರೇಶ್ವರ ಪುಣ್ಯಾಶ್ರಮದ ಯುವ ವಿದ್ಯಾರ್ಥಿಗಳಾದ ಕಮಲಯ್ಯ ಮಠ, ಬಸನಗೌಡ ಸಾನಬಾಳ್, ಉಮೇಶ್ ಕೆ.ಟಿ, ಆದರ್ಶ ಜಾದವ್ ಅವರಿಗೆ 'ಸಮಾಜ ಸೇವಾ ಸಿರಿ' ಪ್ರಶಸ್ತಿ ನೀಡಿ ಗೌರವಿಸಲಾಯಿತು.

# ಕೆ.ಎಚ್. ಪಾಟೀಲರ ಕೊಡುಗೆಗಳ ಸ್ಮರಣೆ

▶▶ಮೊದಲನೇ ಪುಟದಿಂದ

ಹಾಗೂ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ ಗೌರವ ನಮನ ಸಲ್ಲಿಸಿದರು. ಈ ಸಂದರ್ಭದಲ್ಲಿ ಕೆ.ಎಚ್. ಪಾಟೀಲರು ಸಹಕಾರಿ ಕ್ಷೇತ್ರ ಮತ್ತು ಜಿಲ್ಲೆಯ ಅಭಿವೃದ್ಧಿಗೆ ನೀಡಿದ ಅಪ್ರತಿಮ ಕೊಡುಗೆಗಳನ್ನು ಸ್ಮರಿಸಿಕೊಳ್ಳಲಾಯಿತು.

ಕಾರ್ಯಕ್ರಮದಲ್ಲಿ ಕಂದಾಯ ಸಚಿವ ಕೃಷ್ಣ ಬೈರೇಗೌಡ, ಬೀಳಗಿ ಶಾಸಕ ಜೆ.ಟಿ. ಪಾಟೀಲ, ರೋಣ ಶಾಸಕ ಹಾಗೂ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಜಿ.ಎಸ್. ಪಾಟೀಲ, ಮಾಜಿ ಶಾಸಕ ಡಿ.ಆರ್. ಪಾಟೀಲ, ಮಾಜಿ ಸಂಸದ ಐ.ಜಿ. ಸನದಿ, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಕೃಷ್ಣಗೌಡ ಪಾಟೀಲ, ತಾಲೂಕು ಘಟಕದ ಅಧ್ಯಕ್ಷ ಅಶೋಕ ಮಂದಾಲಿ, ಜಿ.ಪಂ ಮಾಜಿ ಅಧ್ಯಕ್ಷ ಸಿದ್ಧಲಿಂಗೇಶ್ವರ ಪಾಟೀಲ, ಕಾಂಗ್ರೆಸ್ ಮುಖಂಡರಾದ ಎಸ್.ಎನ್. ಬಳ್ಳಾರಿ, ವಿದ್ಯಾಧರ ದೊಡ್ಡಮನಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿ.ಪಂ ಮಾಜಿ ಅಧ್ಯಕ್ಷ ಸುಜಾತಾ ದೊಡ್ಡಮನಿ, ನಗರಸಭೆ ಮಾಜಿ ಅಧ್ಯಕ್ಷೆ ರುದ್ರಮ್ಮ ಕೆರಕಲಮಟ್ಟಿ, ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿ ಪರಿಶಿಷ್ಟ ಜಾತಿ ವಿಭಾಗದ ಅಧ್ಯಕ್ಷ ಬಸವರಾಜ ಕಡೆಮನಿ, ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿ ಅಲ್ಪಸಂಖ್ಯಾತರ ವಿಭಾಗದ ಅಧ್ಯಕ್ಷ ಉಮರಫಾರೂಖ್ ಹುಬ್ಬಳ್ಳಿ, ಮುಖಂಡರಾದ ವೀಣಾ ಕಟ್ನಳ್ಳಿ, ಶಾರೂಖ್ ಹುಯಿಲಗೋಳ, ಶಹಬಾಜ್ ಮುಲ್ಲಾ, ಶಂಭು ಕಾಳೆ, ಮಹಮ್ಮದ್ ಶಾಲಗಾರ, ಸರ್ಫರಾಜ್ ಬಬರ್ಚಿ, ವಿನಾಯಕ ಬಳ್ಳಾರಿ, ಸೈಯದ್‌ಖಾಲಿದ ಕೊಪ್ಪಳ, ಅನ್ವರ ನದಾಫ್, ಮಹಾಂತೇಶ ಮಡಿವಾಳರ, ಪರಪ್ಪ ಕಮತರ, ಕಮಲಾಕ್ಷಿ ಹಾದಿಮನಿ, ಯಲ್ಲಮ್ಮ ಜಡಿ, ದ್ರಾಕ್ಷಾಯಣಿ ಹಾಸಿಲ್ಕರ್, ಪೂಜಾ ಬೇವೂರ, ಮರಿಯಪ್ಪ ಸಣ್ಣತಂಗಿಯವರ, ಮಹೇಶ ಪಟ್ಟಣಶೆಟ್ಟಿ, ಜಾಕೀರ ಕುನ್ನಿಬಾವಿ, ಪರಮೇಶಪ್ಪ ಜಂತ್ಲಿ, ಕರಬಸಯ್ಯ ನಾಲ್ವಾಡಮಠ, ಮಲಿಕ್ ಸಂಗಾಪೂರ, ಉಮರ್‌ಫಾರೂಖ್ ಬಾರಿಗಿಡದ, ಅಭಿಷೇಕ, ಶಿವು ಹಾದಿಮನಿ, ಸಂತೋಷ ರಾಮೇನಹಳ್ಳಿ, ಮಹಮ್ಮದ್ ಬೆಟಗೇರಿ, ಅಜ್ಜಪ್ಪ ವಗ್ಗನ್ನವರ, ವಿರೂಪಾಕ್ಷ ನಂದೆಣ್ಣವರ, ಅಹ್ಮದ್ ಖಾಜಿ, ಹುಸೇನ್ ಓಲೇಕಾರ, ಅನ್ವರ ಶಿರಹಟ್ಟಿ, ಕಾಂಗ್ರೆಸ್ ಮುಖಂಡರು, ಕೆ.ಎಚ್. ಪಾಟೀಲ ಅಭಿಮಾನಿಗಳು ಹಾಗೂ ಕಾಂಗ್ರೆಸ್ ಕಾರ್ಯಕರ್ತರು ಹಾಜರಿದ್ದರು.

### ಕಾಡ್ಗಿಚ್ಚು ತಡೆಗೆ ಅರಣ್ಯ ಇಲಾಖೆ ಸರ್ವ ಸನ್ನದ್ಧ । ಬೆಂಕಿ ತಡೆ ರೇಖೆ, ವಾಚ್ ಟವರ್ ನಿರ್ಮಾಣ

# ಪರಿಸರದ ಉಳಿವಿಗೆ ಜನತೆಯ ಸಹಕಾರವಿರಲಿ



■ವಿಜಯಸಾಕ್ಷಿ ಸುದ್ದಿ, ಡಂಬಳ

33 ಸಾವಿರ ಹೆಕ್ಟೇರ್ ವ್ಯಾಪ್ತಿಯ ವಿಸ್ತಾರದಲ್ಲಿ ಹಬ್ಬಿರುವ ಸಸ್ಯ ಕಾಶಿ ಕಪ್ಪತ್ತಗುಡ್ಡ ಅರಣ್ಯ ಸಂರಕ್ಷಿತ ಪ್ರದೇಶದಲ್ಲಿ 132ಕ್ಕೂ ಹೆಚ್ಚು ಭಾಗಗಳಲ್ಲಿ ಫೈರ್‌ಲೈನ್ (ಬೆಂಕಿ ತಡೆ ರೇಖೆ) ನಿರ್ಮಿಸುವ ಮೂಲಕ ಬೆಂಕಿ ತಡೆಗೆ ಅರಣ್ಯ ಇಲಾಖೆ ಸನ್ನದ್ಧವಾಗಿದೆ.

ಹಿರೇವಡ್ಡಟ್ಟಿ, ಡೋಣಿ, ಬಾಗೇವಾಡಿ, ಕಲಕೇರಿ, ಡಂಬಳ ಭಾಗದ ಸಂರಕ್ಷಿತ ಪ್ರದೇಶ, ಸೂಕ್ಷ್ಮ ಪ್ರದೇಶಗಳಲ್ಲಿ ವಾಟರ್ ರಸ್ತೆಗಳಲ್ಲಿ ಬೆಂಕಿ ತಡೆಗೆ ಕಪ್ಪತ್ತಗುಡ್ಡದ 5ಶಾಖೆಗಳಲ್ಲಿ ಫೈರ್ ಲೈನ್ ನಿರ್ಮಿಸಲಾಗುತ್ತಿದೆ. ಪ್ರಾಣಿಗಳು ವಾಸವಿರುವ ಜಾಗೆಗಳನ್ನು ಗುರುತಿಸಿ ಪ್ರಾಣಿಗಳ ಸಂರಕ್ಷಿತ ಪ್ರದೇಶಗಳಲ್ಲಿ, ಕಪ್ಪತ್ತಗುಡ್ಡ ಫ್ಯಾನ್‌ಗಳ ನಿರ್ವಹಣೆಗಾಗಿ ನಿರ್ಮಾಣವಾಗಿರುವ ರಸ್ತೆ ಪಕ್ಕದ ಅರಣ್ಯ ವಲಯದಲ್ಲಿ ವಾಹನಗಳು ಸಂಚರಿಸುವ ಹಾಗೂ ಸೂಕ್ಷ್ಮ ಪ್ರದೇಶಗಳಲ್ಲಿನ ರಸ್ತೆಗಳಲ್ಲಿ ಬೆಂಕಿ ತಡೆಯುವ ರೇಖೆ ನಿರ್ಮಿಸಲಾಗಿದೆ ಎನ್ನುತ್ತಾರೆ ಅರಣ್ಯ ಇಲಾಖೆಯ ಸಿಬ್ಬಂದಿಗಳು.



ಗದಗ ಜಿಲ್ಲಾ ಹಿರಿಯ ಅರಣ್ಯ ಅಧಿಕಾರಿ ಸಂತೋಷಕುಮಾರ ಕೆಂಚಪ್ಪನವರ ಮತ್ತು ಮುಂಡರಗಿಯ ಆರ್‌ಎಫ್‌ಓ ಮಂಜುನಾಥ ಮೇಗಲಮನಿ ವಿಶೇಷ ಅಭಿಯಾನದ ಮೂಲಕ ಜಾಗೃತಿ ಮೂಡಿಸಿ ಪರಿಸರವೇ ಮನುಷ್ಯನ ಶಕ್ತಿಯಾಗಿದೆ ಎಂದು ಸಾರಿದ್ದರಿಂದ ಅಪಾರ ಜನರ ಮೆಚ್ಚುಗೆಗೆ ಕಾರಣವಾಗಿದೆ.

ಕೆಲ ಕಿಡಿಗೇಡಿಗಳು ಹರಕೆಯನ್ನು ಈಡೇರಿಸಿಕೊಳ್ಳುವ ಹಿನ್ನೆಲೆಯಲ್ಲಿ ಬೆಂಕಿ ಹಚ್ಚುವ ಮೌಢ್ಯ ಆಚರಣೆಯಷ್ಟೇ ಅಲ್ಲದೆ, ವಿವಿಧ ಕಂಪನಿಗಳು ನಿರ್ಮಿಸಿರುವ ವಿಂಡ್ ಫ್ಯಾನ್‌ಗಳಲ್ಲಿ ಕೆಲ ಬಾರಿ ಶಾರ್ಟ್ ಸರ್ಕ್ಯೂಟ್‌ನಿಂದ ಉಂಟಾಗುವ ಬೆಂಕಿ ತಡೆಯಲು ನಿಗಾ ಇಡಲಾಗಿದ್ದು, ಕಪ್ಪತ್ತಗುಡ್ಡದ ಸುತ್ತಮುತ್ತಲಿನ ಗ್ರಾಮಗಳ ಜನರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳುವುದು ಮತ್ತು ಪರಿಸರವಾದಿಗಳಿಂದ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲು ಇಲಾಖೆ ಮುಂದಾಗುವುದರ ಮೂಲಕ ಪರಿಸರ ಉಳಿವಿಗಾಗಿ ಅರಣ್ಯ ಸಿಬ್ಬಂದಿ ಮತ್ತು ಗುತ್ತಿಗೆ ವಾಚರ್‌ಗಳ ಮೂಲಕ ಮತ್ತು 2 ಡ್ರೋನ್ ಕಣ್ಗಾವಲು, ಗುಡ್ಡದ ಪ್ರಮುಖ ಭಾಗಗಳಲ್ಲಿ ಕ್ಯಾಮರಾಗಳ ಅಳವಡಿಕೆ ಮಾಡಲಾಗಿದೆ ಎಂದು ಆರ್.ಎಫ್.ಓ ಮಂಜುನಾಥ ಮೇಗಲಮನಿ ಮಾಹಿತಿ ನೀಡಿದರು.

ಕಪ್ಪತ್ತಗುಡ್ಡದ ಉಳಿವಿಗಾಗಿ ಅರಣ್ಯ ಇಲಾಖೆ ಮಾತ್ರ ಶ್ರಮಿಸಿದರೆ ಸಾಲದು. ಪರಿಸರದ ಉಳಿವಿಗಾಗಿ ಜನತೆಯ ಸಹಕಾರ, ಪರಿಸರವಾದಿಗಳ ಕಾಳಜಿಯೊಂದಿಗೆ ಆಮ್ಲಜನಕ ಸೃಷ್ಟಿಯ ಫ್ಯಾಕ್ಟರಿ, ಜನರ ಹೃದಯದಂತಿರುವ ಸಸ್ಯಗಳ ತಾಣ ಕಪ್ಪತ್ತಗುಡ್ಡದ ಸಸ್ಯ ಸಂಪತ್ತಿನ ಉಳಿವಿಗಾಗಿ ಎಲ್ಲರೂ ಕೈಜೋಡಿಸಬೇಕಾಗಿದೆ.

**– ಸಂತೋಷಕುಮಾರ ಕೆಂಚಪ್ಪನವರ.**
ಉಪ ಅರಣ್ಯ ಸಂರಕ್ಷಣಾಧಿಕಾರಿ, ಗದಗ.

**ದಾಖಲೆ ಮಟ್ಟದಲ್ಲಿ ಏರುತ್ತಿರುವ ವೀಳ್ಯದೆಲೆ ದರ; ಗ್ರಾಹಕ ಕಂಗಾಲು**

# ಹವಾಮಾನ ವೈಪರಿತ್ಯದಿಂದ ಗ್ರಾಹಕರ ಕೈ ಸುಡುತ್ತಿದೆ ವೀಳ್ಯದೆಲೆ ಬೆಲೆ!



> ಕಳೆದ ಒಂದು ತಿಂಗಳ ಹಿಂದೆ ವೀಳ್ಯದೆಲೆ ಬೆಳೆಗೆ ರೋಗ ಕಾಣಿಸಿಕೊಂಡಿರುವ ಹಿನ್ನೆಲೆಯಲ್ಲಿ ವೀಳ್ಯದೆಲೆಯ ಇಳುವರಿ ಕುಂಠಿತವಾಗಿದ್ದು, ಅನಿವಾರ್ಯವಾಗಿ ದರ ಏರಿಕೆ ಕಂಡಿದೆ.
>
> **– ಹನಮಂತ ಕರಿ.**
> ಪ್ರಗತಿಪರ ರೈತ, ರುದ್ರಾಪೂರ.

> ಚಳಿಗಾಲದ ಸಮಯ ಮತ್ತು ಈ ಸಮಯದಲ್ಲಿ ಗುಣಮಟ್ಟದ ಇಳುವರಿ ಬಾರದಿರುವುದು, ಜತೆ-ಗೆ ಮಂಗಳ ಕಾರ್ಯಗಳು ಹೆಚ್ಚಾಗಿರುವುದರಿಂದ ಬೆಲೆ ಏರಿಕೆಯಾಗಿದೆ. ಇದು ಇನ್ನೂ 3-4 ತಿಂಗಳು ಹೀಗೆ ಇರುವ ಸಾಧ್ಯತೆ ಇದೆ.
>
> **– ಮಹಾಂತೇಶ್ ಆಂಟಿನ.**
> ಸಹಾಯಕ ತೋಟಗಾರಿಕೆ ಅಧಿಕಾರಿ-ನರೇಗಲ್.



**■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ**

ಇದೀಗ ಮಾರುಕಟ್ಟೆಗಳಲ್ಲಿ ವೀಳ್ಯದೆಲೆಯ ಬೆಲೆ ದಿನದಿಂದ ದಿನಕ್ಕೆ ಗಗನಕ್ಕೆ ಏರುತ್ತಿದ್ದು, ಗ್ರಾಹಕರನ್ನು ತೀವ್ರ ಸಂಕಷ್ಟಕ್ಕೆ ತಳ್ಳಿದೆ. ಪ್ರಸ್ತುತ ಒಂದು ಕಟ್ಟು ವೀಳ್ಯದೆಲೆ ಬೆಲೆ 170ರಿಂದ 200 ರೂ ಗಡಿ ದಾಟಿದ್ದು, ಕಳೆದ ದಶಕದಲ್ಲೇ ಅಪರೂಪದ ದಾಖಲೆ ಏರಿಕೆಯಾಗಿ ಪರಿಣಮಿಸಿದೆ. ಬೆಲೆ ದಿನದಿಂದ ದಿನಕ್ಕೆ ಏರಿಕೆಯಾಗುತ್ತಿರುವುದರಿಂದ ಬೆಳೆಗಾರರಲ್ಲಿ ಸಂತಸ ಮನೆ ಮಾಡಿದ್ದರೆ, ಗ್ರಾಹಕರಿಗೆ ಬಾಯಿ ಸುಡುವಂತೆ ಮಾಡಿದೆ.

ಕಳೆದ ಮೂರು ತಿಂಗಳಿಂದ ವೀಳ್ಯದೆಲೆ ಬೆಲೆ ನಿರಂತರವಾಗಿ ಏರಿಕೆಯಾಗುತ್ತಿದ್ದು, ಇತ್ತೀಚಿನ ಒಂದು ವಾರದಲ್ಲೇ ಒಂದು ಕಟ್ಟಿನ ಬೆಲೆ 50ರಿಂದ 60 ರೂ.ವರೆಗೆ ಹೆಚ್ಚಳವಾಗಿರುವುದು ಗ್ರಾಹಕರ ಮೇಲೆ ಭಾರೀ ಹೊರೆಯಾಗುತ್ತಿದೆ. ಒಂದು ಕಟ್ಟಿನಲ್ಲಿ ಸಾಮಾನ್ಯವಾಗಿ 100 ವೀಳ್ಯದೆಲೆಗಳು ಇರುತ್ತವೆ. ಆದರೆ ಪ್ರಸ್ತುತ ಮಾರುಕಟ್ಟೆಯಲ್ಲಿ ಒಂದು ವೀಳ್ಯದೆಲೆ ಸರಾಸರಿ 2 ರೂ ದರದಲ್ಲಿ ಮಾರಾಟವಾಗುತ್ತಿದೆ.

ಮದುವೆ, ಗೃಹಪ್ರವೇಶ, ಜಾತ್ರೆ, ಧಾರ್ಮಿಕ ಕಾರ್ಯಕ್ರಮ ಸೇರಿದಂತೆ ಶುಭ ಕಾರ್ಯಗಳಿಗೆ ಅತ್ಯವಶ್ಯವಾಗಿ ಬೇಕಾಗಿರುವ ವೀಳ್ಯದೆಲೆಯ ಬೆಲೆಯು ಬಂಗಾರದ ಬೆಲೆಯಂತೆ ದಿನದಿಂದ ದಿನಕ್ಕೆ ಏರುತ್ತಲೇ ಇದ್ದು, ಖರೀದಿಸುವ ಗ್ರಾಹಕರ ಜೇಬಿಗೆ ಕತ್ತರಿ ಬೀಳುತ್ತಿದೆ.

ತಾಲೂಕಿನಾದ್ಯಂತ ಅಂದಾಜು 55 ಹೆಕ್ಟೇರ್ ಪ್ರದೇಶದಲ್ಲಿ ವೀಳ್ಯದೆಲೆ ಬೆಳೆಯಲಾಗುತ್ತಿದ್ದು, ಶಾಂತಗೇರಿ, ಮುಸಿಗೇರಿ, ರುದ್ರಾಪೂರ, ಅಮರಗಟ್ಟಿ, ಗೋಗೇರಿ, ಮಾಟರಂಗಿ, ಜಿಗೇರಿ ರಾಜೂರ ಗುಳಗುಳಿ ಕಲ್ಲಿಗನೂರು ಸೇರಿದಂತೆ ಹತ್ತಾರು ಗ್ರಾಮಗಳ ರೈತರು ವೀಳ್ಯದೆಲೆಯ ಕೃಷಿಯಿಂದ ಜೀವನ ನಡೆಸುತ್ತಿದ್ದಾರೆ.

ವೀಳ್ಯದೆಲೆ ದರ ಹೆಚ್ಚಾಗಲು ಹವಾಮಾನ ವೈಪರೀತ್ಯ ಕಾರಣ ಎನ್ನಲಾಗಿದೆ. ವೀಳ್ಯದೆಲೆ ತೋಟಗಳಲ್ಲಿ ಚಳಿಗೆ ಬಳ್ಳಿಗಳು ಎಲೆ ಕಟ್ಟುತ್ತಿಲ್ಲ. ಮಾರುಕಟ್ಟೆಯಲ್ಲಿ ಬೇಡಿಕೆ ಹೆಚ್ಚಾಗಿದ್ದು, ವೀಳ್ಯದೆಲೆ ದರ ಹೆಚ್ಚಾಗಿದೆ. ಯುಗಾದಿ ನಂತರದಲ್ಲಿ ಹೊಸ ಚಿಗುರು ಬರಲು ಪ್ರಾರಂಭವಾಗಿ ಇಳುವರಿ ಹೆಚ್ಚಾಗುತ್ತದೆ. ನಂತರವಷ್ಟೇ ದರ ಇಳಿಕೆಯಾಗಬಹುದು ಎನ್ನುತ್ತಾರೆ ವ್ಯಾಪಾರಿಗಳು. ರೈತರು ಹೆಚ್ಚಿನ ಪ್ರಮಾಣದಲ್ಲಿ ವೀಳ್ಯದೆಲೆ ಬೆಳೆಯಲು ಸಾಧ್ಯವಾಗುತ್ತಿಲ್ಲ. ಹೊಸದಾಗಿ ವೀಳ್ಯದೆಲೆ ಬಳ್ಳಿ ನಾಟಿ ಮಾಡಿದ ನಂತರ ಎಲೆ ಕಟಾವಿಗೆ ಸಿಗಲು ಕನಿಷ್ಠ 2 ವರ್ಷವಾದರೂ ಬೇಕಾಗುತ್ತದೆ. ಬೆಲೆ ಏರಿಕೆಯಾಗುತ್ತಿರುವುದು ರೈತರಿಗೆ ಸಂತಸ ತಂದಿದೆ. ಆದರೆ ದೊಡ್ಡ ವ್ಯಾಪಾರಸ್ಥರಿಗೆ ಒಂದೆರಡು ಬಂಡಲ್‌ಗೂ ಸಾವಿರಾರು ಬಂಡವಾಳ ಹಾಕುವ ಅನಿವಾರ್ಯತೆ ಎದುರಾಗಿದ್ದು, ಸಣ್ಣ ವ್ಯಾಪಾರಸ್ಥರು ಖರೀದಿಸಿ ಅವುಗಳನ್ನು ಬಿಡಿ ಬಿಡಿಯಾಗಿ ಗ್ರಾಹಕರಿಗೆ ಮಾರಾಟ ಮಾಡಿ ಹಾಕಿದ ಬಂಡವಾಳ ಹಿಂತೆಗೆಯುವ ಸವಾಲು ಎದುರಾಗಿದೆ. ವೀಳ್ಯದೆಲೆಯು ಶುಭ ಸಮಾರಂಭಗಳಿಗೆ ಅಗತ್ಯವಾಗಿ ಬೇಕಾಗಿರುವ ವಸ್ತು. ಇದರೊಂದಿಗೆ ದೈನಂದಿನ ಬದುಕಿನಲ್ಲಿ ವೀಳ್ಯದೆಲೆ ಅವಶ್ಯಕವಾಗಿದೆ. ಬೇಸಿಗೆ ಕಾಲ ಬಂದಿರುವುದರಿಂದ ಇಳುವರಿ ಕುಂಠಿತವಾಗಿದ್ದು, ದರ ಏರಿಕೆಯಾದರೂ ಖರೀದಿಸುವುದು ಅನಿವಾರ್ಯವಾಗಿದೆ ಎಂದು ಕೊಡಗಾನೂರ ಗ್ರಾಮದ ರಮೇಶ ರಾಮಜಿ ಅಭಿಪ್ರಾಯಪಟ್ಟಿದ್ದಾರೆ.

## ಬಾಲಗೌರವ ಪ್ರಶಸ್ತಿ ವಿಜೇತ ಬಾಲಕ ಅನಿಕೇತ ಬಳ್ಳಾರಿಗೆ ಸನ್ಮಾನ



**■ ವಿಜಯಸಾಕ್ಷಿ ಸುದ್ದಿ, ಲಕ್ಮೇಶ್ವರ**

ಪಟ್ಟಣದ ಸರ್ಕಾರಿ ಮಾದರಿ ಪ್ರಾಥಮಿಕ ಶಾಲೆ ನಂ.1ರಲ್ಲಿ 1995-96ನೇ ಸಾಲಿನಲ್ಲಿ 7ನೇ ತರಗತಿಯಲ್ಲಿ ವಿದ್ಯಾಭ್ಯಾಸ ಮಾಡಿದ ಹಳೆ ವಿದ್ಯಾರ್ಥಿಗಳು ಹಾಗೂ ಬೇವಿನಮರದ ಓಣಿಯ ಸಾರ್ವಜನಿಕರಿಂದ ಬಾಲಗೌರವ ಪ್ರಶಸ್ತಿ ವಿಜೇತ ಬಾಲಕ ಅನಿಕೇತ ಬಳ್ಳಾರಿಗೆ ಸನ್ಮಾನ ಕಾರ್ಯಕ್ರಮ ಆಯೋಜಿಸಲಾಯಿತು.

ಕೊಪ್ಪಳದ ಲಯನ್ಸ್ ಸ್ವಾಮಿ ವಿವೇಕಾನಂದ ಶಾಲೆಯಲ್ಲಿ 7ನೇ ತರಗತಿ ಓದುತ್ತಿರುವ ಅನಿಕೇತ ಬಳ್ಳಾರಿಗೆ ಇತ್ತೀಚೆಗೆ ರಾಜ್ಯ ಸರ್ಕಾರದ ಪ್ರತಿಷ್ಠಿತ ಬಾಲವಿಕಾಸ ಅಕಾಡೆಮಿಯಿಂದ ಬಾಲಗೌರವ ಪ್ರಶಸ್ತಿ ಲಭಿಸಿದೆ. ಈ ಹಿನ್ನೆಲೆಯಲ್ಲಿ ಅವರು ಲಕ್ಮೇಶ್ವರ ಪಟ್ಟಣಕ್ಕೆ ಆಗಮಿಸಿದ್ದ ಸಂದರ್ಭದಲ್ಲಿ ಸ್ಥಳೀಯರು ಗೌರವ ಸಲ್ಲಿಸಿದರು.

ಉತ್ತಮ ಈಜುಗಾರ, ಅಭಿನಯ ಹಾಗೂ ನೃತ್ಯದಲ್ಲಿ ನಿಪುಣನಾಗಿರುವ ಅನಿಕೇತ, ಶ್ರೀಧರ ಜಾವೂರ ನಿರ್ದೇಶನದ "ನಮ್ಮ ಭಾಷೆ ನಮ್ಮ ಕನ್ನಡ" ಮಕ್ಕಳ ಕಥಾ ಚಲನಚಿತ್ರದಲ್ಲಿ ಪ್ರಮುಖ ಪಾತ್ರದಲ್ಲಿ ಅಭಿನಯಿಸಿರುವುದು ವಿಶೇಷ. ಈ ಸಂದರ್ಭದಲ್ಲಿ ಅಶೋಕ ಬೇವಿನಮರದ, ಕೊಟ್ರಪ್ಪ ಹರಪನಹಳ್ಳಿ, ಶಿವಲಿಂಗಯ್ಯ ಹೊತಗಿಮಠ, ನಾಗರಾಜ ಕೊಂಗಿ, ಕೊಟ್ರೇಶ್ ಹಣಗಿ, ಸುರೇಶ್ ಸುಣಗಾರ, ಬಸವರಾಜ ನಾಗನೂರ, ಫಕ್ಕೀರೇಶ ಜಾಲಗಾರ, ಮಂಜುನಾಥ ನಾವಿ, ಅನಸೂಯಾ ಹೊತಗಿಮಠ, ರತ್ನವ್ವ ನೂಲ್ವಿ, ಚನ್ನಮ್ಮ ಕೊಂಗಿ, ಲಕ್ಷ್ಮೀ ಕೊಂಗಿ, ಶೇಖವ್ವ ನೂಲ್ವಿ, ಈರಮ್ಮ ಬೇವಿನಮರದ, ಪ್ರೇಮವ್ವ ಹರಪನಹಳ್ಳಿ, ಅನಿತಾ ಬಳ್ಳಾರಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

**ನೀಲಗುಂದ ಗುದ್ನೇಶ್ವರಮಠದ ದಿವ್ಯ ಚೇತನ ಟ್ರಸ್ಟ್ ವತಿಯಿಂದ ವಿವಿಧ ಕಾರ್ಯಕ್ರಮ**


## ಫೆ. 13ರಿಂದ 15ರವರೆಗೆ ಮಹಾ ಶಿವರಾತ್ರಿ ಉತ್ಸವ

**■ ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಪಟ್ಟಣದ ಸಮೀಪದ ನೀಲಗುಂದ ಗುದ್ನೇಶ್ವರಮಠದ ದಿವ್ಯ ಚೇತನ ಟ್ರಸ್ಟ್ ವತಿಯಿಂದ ಫೆ. 13ರಿಂದ 15ರವರೆಗೆ ಮಾಹಾಶಿವರಾತ್ರಿ ಉತ್ಸವ ಜರಗಲಿದೆ.

ಫೆ. 13ರಂದು ಸಾಯಂಕಾಲ 5.30 ಗಂಟೆಗೆ ದಿವ್ಯ ಚೇತನ ಆಂಗ್ಲ ಮಾಧ್ಯಮ ಶಾಲಾ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮದ ಸಾನ್ನಿಧ್ಯ ಅಣ್ಣಿಗೇರಿ ದಾಸೋಹಮಠದ ಶಿವಕುಮಾರ ಮಾಹಾಸ್ವಾಮಿಗಳು ವಹಿಸಿಕೊಳ್ಳುವರು. ಅಧ್ಯಕ್ಷತೆಯನ್ನು ಗದಗ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ಉದ್ಘಾಟಕರಾಗಿ ಕೃಷ್ಣಗೌಡ ಪಾಟೀಲ, ಮುಖ್ಯ ಅತಿಥಿಗಳಾಗಿ ಗದಗ ಜಿಲ್ಲಾ ಬಿಜೆಪಿ ಅಧ್ಯಕ್ಷ ರಾಜು ಕುರಡಗಿ, ಕೊಟ್ರೇಶ ವಿಭೂತಿ, ಡಿಡಿಪಿಐ ಆರ್.ಎಸ್. ಬುರಡಿ, ಡಾ. ಬಸವರಾಜ ಬಳ್ಳಾರಿ, ಗಿರೀಶ ಡಬಾಲಿ, ಎಂ.ಎಂ. ಬಡ್ನಿ, ಬಿಇಓ ವಿ.ವಿ. ನಡುವಿನಮನಿ, ಬಿ.ಡಿ. ಹರ್ತಿ, ಬಸವರಾಜ ಬಡ್ನಿ, ಚಂಬಣ್ಣಾ ಹಾಳದೋಟದ ಭಾಗವಹಿಸುವರು.

ಫೆ. 14 ಸಾಯಂಕಾಲ 6.30ಕ್ಕೆ ಸಂತವಾಣಿ ಹಾಗೂ ಮಕ್ಕಳಿಂದ ಮಲ್ಲಕಂಬ ಪ್ರದರ್ಶನದ ಸಾನ್ನಿಧ್ಯವನ್ನು ಶಿರಹಟ್ಟಿ ಫಕ್ಕೀರೇಶ್ವರಮಠದ ಜಗದ್ಗುರು ಫಕ್ಕೀರ ದಿಂಗಾಲೇಶ್ವರ ಮಾಹಾಸ್ವಾಮಿಗಳು ಹಾಗೂ ಹೊಸಳ್ಳಿ ಬೂದೀಶ್ವರಮಠದ ಅಭಿನವ ಬೂದೀಶ್ವರ ಮಾಹಾಸ್ವಾಮಿಗಳು ವಹಿಸಿಕೊಳ್ಳುವರು. ಅಧ್ಯಕ್ಷತೆಯನ್ನು ಹಾವೇರಿ-ಗದಗ ಲೋಕಸಭಾ ಸದಸ್ಯ ಬಸವರಾಜ ಬೊಮ್ಮಾಯಿ ವಹಿಸುವರು. ಉದ್ಘಾಟನೆಯನ್ನು ಗದಗ ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ಮುಖ್ಯ ಅತಿಥಿಗಳಾಗಿ ಮಾಜಿ ಶಾಸಕ ಡಿ.ಆರ್. ಪಾಟೀಲ, ಅತಿಥಿಗಳಾಗಿ ಡಾ. ಬಸವರಾಜ ಬೊಮ್ಮನಹಳ್ಳಿ, ಡಾ. ಎಸ್.ಸಿ. ಚವಡಿ, ಎನ್.ಎಂ. ಅರಮನಿ, ಶಿವಯೋಗಿ ಸುರಕೋಡ, ಅಂದಪ್ಪ ಜವಳಿ, ರಾಮಣ್ಣಾ ಕಮಾಜಿ, ಶರಣು ರೆಡ್ಡೇರ, ಶಿವಪ್ಪ ಕೊಳಿವಾಡ, ವಿಜಯ ನೀಲಗುಂದ, ಸಂಜಯ ನೀಲಗುಂದ ಭಾಗವಹಿಸುವರು.



> ಫೆ. 15ರ ಸಾಯಂಕಾಲ 6.30 ಗಂಟೆಗೆ ಮಾಹಾಶಿವರಾತ್ರಿ ಕಾರ್ಯಕ್ರಮ ಸಾನ್ನಿಧ್ಯವನ್ನು ಮುಳಗುಂದ ಗವಿಮಠದ ಮಲ್ಲಿಕಾರ್ಜುನ ಮಾಹಾಸ್ವಾಮಿಗಳು ಹಾಗೂ ಬಸವ ಬೆಳವಿ ಚರಂತೇಶ್ವರ ವಿರಕ್ತಮಠದ ಶರಣಬಸವ ದೇವರು ವಹಿಸುವರು. ಅಧ್ಯಕ್ಷತೆಯನ್ನು ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ. ಪಾಟೀಲ, ಉದ್ಘಾಟಕರಾಗಿ ಅ.ಭಾ.ವಿ.ಲಿ.ಮಾ ರಾಜ್ಯಾಧ್ಯಕ್ಷ ಶಂಕರ ಬಿದರಿ, ಮುಖ್ಯ ಅತಿಥಿಗಳಾಗಿ ಗೋವಿಂದರೆಡ್ಡಿ ಅಳವಂಡಿ, ರವಿ ಚನ್ನಣ್ಣವರ, ಗದಗ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ ಜಗದೀಶ, ಮಾಹಾವೀರ ಬಾಫನಾ, ಬಸವರಾಜ ಬಿಸನಹಳ್ಳಿ, ಅಪ್ಪಣ್ಣಾ ಇನಾಮತಿ, ಎಂ.ಡಿ. ಬಟ್ಟೂರ, ಸಿದ್ದಲಿಂಗೇಶ ಪಾಟೀಲ, ಮಲ್ಲಪ್ಪ ಅದರಗುಂಚಿ, ಷಣ್ಮುಖ ಗುರಿಕಾರ ಭಾಗವಹಿಸುವವರು.

ಫೆ. 15ರ ರಾತ್ರಿ 9 ಗಂಟೆಗೆ ಗೌರವ ಸನ್ಮಾನ ಕಾರ್ಯಕ್ರಮದಲ್ಲಿ ಅನಿಲ ಸಂಶಿಮಠ, ಡಾ. ಎನ್.ಎಚ್. ಓಲೇಕಾರ, ರತ್ನವ್ವ ಚನ್ನಣ್ಣವರ, ಶಿವದರ್ಶನ ರಾಠೋಡ, ಬಸವರಾಜ ಕೊಳಚಿ ಹಾಗೂ ಪರಶುರಾಮ ದಿವಾನದ ಪಾಲ್ಗೊಳ್ಳುವರು. 'ದಿವ್ಯ ಚೇತನ ಪ್ರಶಸ್ತಿ'ಯನ್ನು ಅಪ್ಪಣ್ಣಾ ಇನಾಮತಿ ಅವರಿಗೆ ನೀಡಿ ಗೌರವಿಸಲಾಗುವುದು. ಸಂಗೀತ ಕಾರ್ಯಕ್ರಮದಲ್ಲಿ ಪಂಡಿತ ದೊಡ್ಡಯ್ಯ, ಶಂಕರ ಬಿನ್ನಾಳ, ಪುಟ್ಟರಾಜ ಹಿರೇಮಠ, ಕುಮಾರೇಶ ಬಿನ್ನಾಳ ಇವರಿಂದ ಜರುಗುವುದು. ನಂತರ ಜಗಲಬಂದಿ ಸಂಗೀತ ಕಾರ್ಯಕ್ರಮ ಪದ್ಮಭೂಷಣ ಡಾ. ಪಂ.ಪುಟ್ಟರಾಜ ಗವಾಯಿಗಳವರ ಶಿಷ್ಯರುಗಳಾದ ಡಾ. ನಾರಾಯಣ ಹಿರೇಕೊಳಚಿ, ಪಂ. ರುದ್ರೇಶಕುಮಾರ, ಪಂ. ಪ್ರವೀಣ ಹೂಗಾರ, ಡಾ. ಹನಮಂತ ಕೊಡಗಾನೂರು. ಪಂ. ವೀರಭದ್ರಪ್ಪ ಬೆನಕಲ್ ಇವರಿಂದ, ಹಾಸ್ಯ ಕಾರ್ಯಕ್ರಮ ಮಂಜುನಾಥ ಆಗೋಲಿ ಇವರಿಂದ ಜರುಗುವುದು ಎಂದು ನೀಲಗುಂದ ಗುದ್ನೇಶ್ವರಮಠ ಪ್ರಭುಲಿಂಗ ದೇವರು ಪ್ರಕಟಣೆಗೆ ತಿಳಿಸಿದ್ದಾರೆ.

## ರೈತರ ಹಿತ ಕಾಯುವುದು ಸಹಕಾರಿಗಳ ಕರ್ತವ್ಯ

▶▶ ಮೊದಲನೇ ಪುಟದಿಂದ

ಸಂಘಗಳಲ್ಲಿ ಸ್ಥಳಾವಕಾಶವಿದ್ದರೆ ಅಲ್ಲಿ ವಾಣಿಜ್ಯ ಸಂಕೀರ್ಣಗಳನ್ನು ನಿರ್ಮಿಸಿಕೊಳ್ಳಬೇಕು. ಇದರಿಂದ ಸಹಕಾರಿ ಸಂಘಗಳಿಗೆ ಆದಾಯ ಸಿಗುತ್ತದೆ. ಸಹಕಾರಿ ಸಂಘಗಳಿಗೆ ಸರಕಾರ ಕೊಡಮಾಡುವ ಸೌಲಭ್ಯಗಳನ್ನು ಸದ್ಬಳಕೆ ಮಾಡಿಕೊಂಡು ರೈತರ ಮತ್ತು ಕೃಷಿ ಪತ್ತಿನ ಸಹಕಾರಿ ಸಂಘದ ಬೆಳವಣಿಗೆಯಲ್ಲಿ ಪ್ರಮುಖ ಪಾತ್ರ ವಹಿಸಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಪಿಎಲ್‌ಡಿ ಬ್ಯಾಂಕ್ ಮಾಜಿ ಅಧ್ಯಕ್ಷರಾದ ಸಂಗಪ್ಪ ಮೆಣಸಿನಕಾಯಿ, ಪಸಾರದ, ವಿ.ಬಿ. ಸೋಮನಕಟ್ಟಿಮಠ ಸೇರಿದಂತೆ ಪಿಎಲ್‌ಡಿ ಬ್ಯಾಂಕ್ ನಿರ್ದೇಶಕರು, ಮುಖಂಡರು ಉಪಸ್ಥಿತರಿದ್ದರು.

> ಇತ್ತೀಚೆಗೆ ಹೊಸಳ್ಳಿ ಗ್ರಾಮದ ಕೃಷಿ ಪತ್ತಿನ ಸಹಕಾರಿ ಸಂಘದ ಚುನಾವಣೆ ಗ್ರಾ.ಪಂ ಚುನಾವಣೆಯನ್ನೂ ಮೀರಿಸುವಂತೆ ನಡೆದಿತ್ತು. ಅಲ್ಲದೆ ಗ್ರಾಮದಲ್ಲಿ ಡಿಆರ್ ಪೊಲೀಸ್ ತುಕಡಿಯನ್ನು ನಿಯೋಜನೆ ಮಾಡಲಾಗಿತ್ತು. ಒಟ್ಟು 12 ಸ್ಥಾನಗಳನ್ನು ಹೊಂದಿರುವ ಹೊಸಳ್ಳಿ ಕೃಷಿ ಪತ್ತಿನ ಸಹಕಾರಿ ಸಂಘಕ್ಕೆ ಬಿಜೆಪಿ ಬೆಂಬಲಿತ ಇಬ್ಬರು ಅಭ್ಯರ್ಥಿಗಳು ಅವಿರೋಧವಾಗಿ ಆಯ್ಕೆಯಾಗಿದ್ದರು. ಉಳಿದ 10 ಸ್ಥಾನಗಳಿಗೆ ನಡೆದ ಚುನಾವಯಲ್ಲಿ 10 ಸ್ಥಾನಗಳನ್ನು ಕಾಂಗ್ರೆಸ್ ಬೆಂಬಲಿತ ಅಭ್ಯರ್ಥಿಗಳು ಗೆಲ್ಲುವ ಮೂಲಕ ಆಡಳಿತದ ಚುಕ್ಕಾಣಿಯನ್ನು ಹಿಡಿದರು. ಹೇಮಯ್ಯ ಹಿರೇಮಠ, ಭೀಮರೆಡ್ಡೆಪ್ಪ ರೆಡ್ಡೆರ, ಶರಣಪ್ಪ ಮೇಟಿ, ಕಳಕಪ್ಪ ಪಟ್ಟಣಶೆಟ್ಟಿ, ಅಂದಪ್ಪ ಹೂಗಾರ, ಪರಶುರಾಮ ಕುರಿ, ಬಸವರಾಜ ತೆಗ್ಗಿ, ಶರಣಪ್ಪ ಪೂಜಾರ, ಜುಲೇಖಾ ಬೇಗಂ ಹೊಸಳ್ಳಿ, ರೇಣುಕಾಬಾಯಿ ಕದಂ ಆಯ್ಕೆಗೊಂಡ ಸದಸ್ಯರಾಗಿದ್ದಾರೆ.

## ವೀರೇಶ್ವರ ಮಹಾ ಶಿವಶರಣರ ಮಹಾಮಠದ ರಥೋತ್ಸವ ಫೆ. 22ರಂದು

**■ ವಿಜಯಸಾಕ್ಷಿ ಸುದ್ದಿ, ಗದಗ**

ತಾಲೂಕಿನ ನರಸಾಪೂರ ಗ್ರಾಮದ ನಾಲತ್ತವಾಡ ಶ್ರೀ ವೀರೇಶ್ವರ ಮಹಾ ಶಿವಶರಣರ ಮಹಾಮಠದಲ್ಲಿ ಫೆಬ್ರವರಿ 21 ಮತ್ತು 22ರಂದು ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಜರುಗಲಿವೆ ಎಂದು ಶ್ರೀಮಠದ ಶಿವಕುಮಾರ ಶರಣರು ತಿಳಿಸಿದ್ದಾರೆ.

ಫೆ. 21ರಂದು ಬೆಳಿಗ್ಗೆ 8 ಗಂಟೆಗೆ ಶ್ರೀ ವೀರೇಶ್ವರ ಮಹಾ ಶಿವಶರಣರು ಹಾಗೂ ಶ್ರೀ ಚಂದ್ರಶೇಖರ ಮಹಾ ಶಿವಶರಣರ ಮೂರ್ತಿಗಳಿಗೆ ಮಹಾರುದ್ರಾಭಿಷೇಕ ನೆರವೇರಲಿದೆ. ಬೆಳಿಗ್ಗೆ 10ಕ್ಕೆ ಶ್ರೀ ಚಂದ್ರಶೇಖರ ಮಹಾ ಶಿವಶರಣರ ಪುಣ್ಯಸ್ಮರಣೋತ್ಸವ ನಡೆಯಲಿದೆ. ಸಂಜೆ 5ಕ್ಕೆ ಬೆಟಗೇರಿಯ ಶ್ರೀ ವೀರಭದ್ರೇಶ್ವರ ದೇವಸ್ಥಾನದಿಂದ ಶ್ರೀ ವೀರೇಶ್ವರ ಶರಣರ ಭಾವಚಿತ್ರದೊಂದಿಗೆ ಗುಗ್ಗಳ ಕಾರ್ಯಕ್ರಮ ಜರುಗಲಿದೆ.

ಫೆ. 22ರಂದು ಅಡ್ನೂರು ದಾಸೋಹ ಮಠದ ಅಭಿನವ ಪಂಚಾಕ್ಷರ ಶಿವಾಚಾರ್ಯ ಸ್ವಾಮೀಜಿಗಳ ಸಾನ್ನಿಧ್ಯದಲ್ಲಿ ಹಾಗೂ ಶಿವಕುಮಾರ ಶರಣರ ಸಮ್ಮುಖದಲ್ಲಿ ಷಟಸ್ಥಲ ಧ್ವಜಾರೋಹಣದ ನಂತರ ಧರ್ಮಸಭೆ ನಡೆಯಲಿದೆ. ವೀರೇಶ್ವರ ಪುಣ್ಯಾಶ್ರಮದ ಡಾ. ಕುಬೇಂದ್ರಶಾಸ್ತ್ರಿ ಎಸ್. ಹಕ್ಕಂಡಿ ಅವರಿಂದ ಸಂಗೀತ ಕಾರ್ಯಕ್ರಮ ಜರುಗಲಿದೆ.

ಮಧ್ಯಾಹ್ನ 2ಕ್ಕೆ ಮಹಾಪ್ರಸಾದ ವಿತರಣೆ ನಡೆಯಲಿದ್ದು, ಸಂಜೆ 5ಕ್ಕೆ ಶ್ರೀ ವೀರೇಶ್ವರ ಮಹಾ ಶಿವಶರಣರ ರಥೋತ್ಸವ ವಿಜೃಂಭಣೆಯಿಂದ ನೆರವೇರಲಿದೆ.

ಫೆ. 23ರಂದು ಬೆಳಿಗ್ಗೆ 10ಕ್ಕೆ ಕಡುಬಿನ ಕಾಳಗ ಕಾರ್ಯಕ್ರಮ ಜರುಗಲಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹಾವೇರಿಯಲ್ಲಿ 1.10 ಲಕ್ಷ ಹಕ್ಕುಪತ್ರ ವಿತರಣೆ

▶▶ ಮೊದಲನೇ ಪುಟದಿಂದ

ಲಕ್ಷ ಜನರಿಗೆ ಹಕ್ಕುಪತ್ರ ನೀಡಲಾಗಿದೆ. ಫೆ. 14ರಂದು ಹಾವೇರಿಯಲ್ಲಿ ಸಮಾವೇಶ ನಡೆಸಿ ಇದೇ ಸಂಖ್ಯೆಯ ಹಕ್ಕುಪತ್ರಗಳನ್ನು ವಿತರಿಸಲಾಗುವುದು ಎಂದು ಹೇಳಿದರು. ರಾಜ್ಯದಲ್ಲಿ ಮೃತರ ಹೆಸರಿನಲ್ಲಿ ಉಳಿದಿದ್ದ 49 ಲಕ್ಷ ಜಮೀನುಗಳನ್ನು ಗುರುತಿಸಿ ವಾರಸುದಾರರಿಗೆ ಹಸ್ತಾಂತರಿಸುವ ಕಾರ್ಯ ನಡೆಯುತ್ತಿದೆ. ಈಗಾಗಲೇ 12 ಲಕ್ಷ ಮೂಲ ವಾರಸುದಾರರಿಗೆ ಜಮೀನು ಹಸ್ತಾಂತರಿಸಲಾಗಿದೆ. ಗದಗ ಜಿಲ್ಲೆಯಲ್ಲಿ ಇಂತಹ 50 ಸಾವಿರ ಪ್ರಕರಣಗಳಿದ್ದು, ಸದ್ಯ 12 ಸಾವಿರ ಮಾತ್ರ ಬಾಕಿ ಉಳಿದಿವೆ. ಗ್ರಾಮ ಲೆಕ್ಕಾಧಿಕಾರಿಗಳು ಆಸಕ್ತಿಯಿಂದ ಕೆಲಸ ಮಾಡುತ್ತಿದ್ದು, ಅವರಿಗೆ ಪ್ರೋತ್ಸಾಹಧನವಾಗಿ 5 ಕೋಟಿ ರೂ. ನೀಡಲು ಸರ್ಕಾರ ತೀರ್ಮಾನಿಸಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ತಾಲೂಕು ಅಧ್ಯಕ್ಷ ಅಶೋಕ ಮಂದಾಲಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್ ಉಪಸ್ಥಿತರಿದ್ದರು.

## ಬೆಳೆ ದರ್ಶಕ ಆ್ಯಪ್‌ನಲ್ಲಿ ಆಕ್ಷೇಪಣೆ ಸಲ್ಲಿಸಲು ಫೆ.15 ಕೊನೆಯ ದಿನ

**■ ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯ ರೈತರು ಬೆಳೆ ಸಮೀಕ್ಷೆ ಆ್ಯಪ್‌ನಲ್ಲಿ ತಮ್ಮ ಬೆಳೆಗಳ ವಿವರಗಳು ತಪ್ಪಾಗಿ ನಮೂದಾಗಿದ್ದಲ್ಲಿ, ಫೆಬ್ರುವರಿ 15ರೊಳಗಾಗಿ ಬೆಳೆ ದರ್ಶಕ ಆ್ಯಪ್ ಮೂಲಕ ಆಕ್ಷೇಪಣೆಯನ್ನು ಕಡ್ಡಾಯವಾಗಿ ಸಲ್ಲಿಸಬೇಕು ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ರೈತರು ತಮ್ಮ ಖಾತೆ ಸಂಖ್ಯೆ, ಬೆಳೆ ಪ್ರಕಾರ, ವಿಸ್ತೀರ್ಣ ಸೇರಿದಂತೆ ಎಲ್ಲಾ ವಿವರಗಳನ್ನು ಪರಿಶೀಲಿಸಿ, ಯಾವುದೇ ತಪ್ಪುಗಳಿದ್ದಲ್ಲಿ ನಿಗದಿತ ಅವಧಿಯೊಳಗೆ ತಿದ್ದುಪಡಿ ಮಾಡಿಕೊಳ್ಳುವಂತೆ ಅವರು ಮನವಿ ಮಾಡಿದ್ದಾರೆ.

## ದೇವಸ್ಥಾನದ ಕೆಲಸದಲ್ಲಿ ರಾಜಕೀಯ ಮಾಡದಿರಿ



**■ ವಿಜಯಸಾಕ್ಷಿ ಸುದ್ದಿ, ಗದಗ**

ನಿಮ್ಮೆಲ್ಲರ ಒಗ್ಗಟ್ಟಿನಿಂದ ಭಕ್ತಿಯ ಜೊತೆಗೆ ಶಕ್ತಿ ಕೇಂದ್ರವಾಗಿ ಬೆಳೆಯಲಿ ಎಂದು ಕಾಂಗ್ರೆಸ್ ಪಕ್ಷದ ಯುವ ಘಟಕದ ಅಧ್ಯಕ್ಷ ಕೃಷ್ಣಗೌಡ ಪಾಟೀಲ ಆಶಿಸಿದರು.

ಅವರು ನಗರದ ಸಂಭಾಪೂರ ರಸ್ತೆಯ ಕೆ.ಇ.ಬಿ ಗ್ರಿಡ್ ಹಿಂದುಗಡೆ ಬಡಾವಣೆಯಲ್ಲಿ ಶ್ರೀ ರೇಣುಕಾದೇವಿ ಪ್ರತ್ಯಂಗಿರಾದೇವಿ ಟ್ರಸ್ಟ್ ಗದಗ-ಬೆಟಗೇರಿ ಇವರ ಆಶ್ರಯದಲ್ಲಿ ನಡೆದ ಶ್ರೀ ರೇಣುಕಾದೇವಿ ಹಾಗೂ ಶ್ರೀ ಪ್ರತ್ಯಂಗಿರಾದೇವಿ ಉಭಯ ದೇವಸ್ಥಾನಗಳ ಭೂಮಿಪೂಜಾ ನೆರವೇರಿಸಿ ಮಾತನಾಡಿದರು.

ಎಲ್ಲರ ಜೀವನದಲ್ಲಿ ದೇವಿಯ ಶಕ್ತಿಯ ಅನುಭವವಾಗಿರುತ್ತದೆ. ಎಲ್ಲರೂ ದೇವಸ್ಥಾನದ ಕೆಲಸದಲ್ಲಿ ರಾಜಕೀಯ ಮಾಡದೆ ಒಗ್ಗಟ್ಟಿನಿಂದ ಕೆಲಸ ಮಾಡಿದಾಗ ಮಾತ್ರ ನಿರೀ-ಕ್ಷೆಗೂ ಮೀರಿ ಕೆಲಸವಾಗುತ್ತದೆ. ಕೂಡಲೇ ದೇವಸ್ಥಾನದ ಕಟ್ಟಡದ ನಿರ್ಮಾಣ ಕಾರ್ಯ ಪ್ರಾರಂಭದ ಜೊತೆಗೆ ಸಮ ಸಮಾಜದ ನಿರ್ಮಾಣವಾಗಬೇಕಾಗಿದೆ ಎಂದರು.

ನಗರಸಭೆಯ ಮಾಜಿ ಅಧ್ಯಕ್ಷ ಫೀರಸಾಬ ಕೌತಾಳ ಮಾತನಾಡಿ, ದೇವನೊಬ್ಬ ನಾಮ ಹಲವು. ಎಲ್ಲರೂ ಒಟ್ಟಾಗಿ ಸಹೋದರತೆಯಿಂದ ಬಾಳಿ ಬದುಕಿದಾಗ ಮಾತ್ರ ಈ ಮಾನವ ಜನ್ಮ ಸಾರ್ಥಕವಾಗುವದು. ನಿಮ್ಮ ಎಲ್ಲ ಬೇಡಿಕೆಗಳಿಗೆ ಸ್ಪಂದಿಸುವದಾಗಿ ತಿಳಿಸಿದರು. ಅತಿಥಿಗಳಾಗಿ ಆಗಮಿಸಿದ್ದ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ ಮಾತನಾಡಿ, ದೇವಸ್ಥಾನದ ಕಟ್ಟಡದ ನಿರ್ಮಾಣಕ್ಕೆ ಅನುದಾನವನ್ನು ಕೊಡಿಸುವ ಪ್ರಾಮಾಣಿಕ ಪ್ರಯತ್ನ ಮಾಡುವದಾಗಿ ಭರವಸೆ ನೀಡಿದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾದ ಗದಗ ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ, ಯುವ ಮುಖಂಡ ಅಮರೇಶ ಬೆಟಗೇರಿ, ಹನಮಂತ ವೀರಾಪೂರ, ಶ್ರೀ ರೇಣುಕಾದೇವಿ ಪ್ರತ್ಯಂಗಿರಾದೇವಿ ಟ್ರಸ್ಟ್‌ನ ಗೌರವ ಅಧಕ್ಷರಾದ ಗದಿಗೆವ್ವ ಗುಡೇನಕಟ್ಟಿ, ಅಧ್ಯಕ್ಷರಾದ ಅನಿತಾ ಬಾಗಲಕೋಟಿ, ಉಪಾಧ್ಯಕ್ಷರಾದ ಮಂಜುಳಾ ಕುರಿ, ಕಾರ್ಯದರ್ಶಿ ಗಂಗವ್ವ ಚಕ್ರಣ್ಣವರ, ಸಹಕಾರ್ಯದರ್ಶಿ ರೇಖಾ ಬಾಗಲಕೋಟಿ, ಸಂಘಟನಾ ಕಾರ್ಯದರ್ಶ ಈರಮ್ಮ ಬಾಗಲಕೋಟಿ, ಖಜಾಂಚಿ ರೇಖಾ ಜಡಿಯವರ, ಶೈಲಾ ಬೆರಗೇರಿ, ತೇಜಸ್ವಿ ಬಾಗಲಕೋಟಿ ಮುಂತಾದವರು ಉಪಸ್ಥಿತರಿದ್ದರು. ಬಾಹುಬಲಿ ಜೈನರ ಕಾರ್ಯಕ್ರಮ ನಿರೂಪಣೆ ಮಾಡಿದರು. ಗಂಗಾ ಚಕ್ರಣ್ಣವರ ಸ್ವಾಗತಿಸಿದರು. ರೇಖಾ ಜಡಿಯವರ ವಂದಿಸಿದರು.

# ನಿಷ್ಕ್ರಿಯ ಸಣ್ಣ ಉಳಿತಾಯ ಏಜೆನ್ಸಿಗಳ ಭದ್ರತಾ ಠೇವಣಿ ಹಿಂಪಡೆಯಲು ಏಜೆಂಟರಿಗೆ ಸೂಚನೆ

■ವಿಜಯಸಾಕ್ಷಿ ಸುದ್ದಿ, ಗದಗ

ಸಹಾಯಕ ನಿರ್ದೇಶಕರ ಕಚೇರಿ, ಪಿಂಚಣಿ, ಸಣ್ಣ ಉಳಿತಾಯ ಮತ್ತು ಆಸ್ತಿ-ಋಣ ನಿರ್ವಹಣೆ ಇಲಾಖೆ, ಗದಗ ಇವರ ವತಿಯಿಂದ ಸಣ್ಣ ಉಳಿತಾಯ ಯೋಜನೆಯಡಿ ಒಕಏಃಜ (Mahila Pradhan Kshetriya Bachat Yojana) ಹಾಗೂ SAS (Standard Agency System) ಏಜೆಂಟರ ನೇಮಕಾತಿಯ ಸಂದರ್ಭದಲ್ಲಿ ಭದ್ರತಾ ಠೇವಣಿಯಾಗಿ ರಾಷ್ಟ್ರೀಯ ಉಳಿತಾಯ ಪತ್ರ (NSC) ಮತ್ತು *ಕಿಸಾನ್ ವಿಕಾಸ ಪತ್ರ (ಏಗಿಕ)*ಗಳನ್ನು ಅಡವಿರಿಸಿಕೊಳ್ಳಲಾಗಿತ್ತು.

ಸಣ್ಣ ಉಳಿತಾಯ ಏಜೆನ್ಸಿ ನಿಯಮಗಳ ಪ್ರಕಾರ ಪ್ರತಿ ಮೂರು ವರ್ಷಕ್ಕೊಮ್ಮೆ ಏಜೆನ್ಸಿ ನವೀಕರಣ ಮಾಡಲಾಗುತ್ತಿದ್ದು, ನವೀಕರಣಗೊಳ್ಳದೇ ನಿಷ್ಕ್ರಿಯಗೊಂಡಿರುವ ಹಲವು ಏಜೆನ್ಸಿಗಳ ಭದ್ರತಾ ಠೇವಣಿಗಳು ಇನ್ನೂ ಕಚೇರಿಯಲ್ಲಿ ಉಳಿದಿವೆ.

ಈ ಸಂಬಂಧ ನಿಷ್ಕ್ರಿಯ ಏಜೆನ್ಸಿಗಳ ಏಜೆಂಟರಿಗೆ ತಮ್ಮ ಭದ್ರತಾ ಠೇವಣಿ ಹಿಂಪಡೆಯುವಂತೆ ಅಗತ್ಯ ದಾಖಲೆಗಳೊಂದಿಗೆ ಸಂಪರ್ಕಿಸುವಂತೆ ಕಚೇರಿಯಿಂದ ಪತ್ರ ವ್ಯವಹಾರ ಮಾಡಲಾಗಿತ್ತು. ಆದರೆ ಕೆಲವು ಏಜೆಂಟರು ವಿಳಾಸದಲ್ಲಿ ಲಭ್ಯವಿಲ್ಲದಿರುವುದು, ವಿಳಾಸ ಬದಲಾವಣೆ ಅಥವಾ ಮರಣ ಹೊಂದಿರುವ ಕಾರಣ ಪತ್ರಗಳು ಹಿಂದಿರುಗಿವೆ.

ಆದ್ದರಿಂದ ಸಂಬಂಧಪಟ್ಟ ನಿಷ್ಕ್ರಿಯ ಏಜೆನ್ಸಿಗಳ ಏಜೆಂಟರು ಅಥವಾ ಅವರ ವಾರಸುದಾರರು ಲಭ್ಯವಿರುವ ದಾಖಲೆಗಳೊಂದಿಗೆ ಕಚೇರಿಯನ್ನು ಸಂಪರ್ಕಿಸಿ ಅಡವಿಟ್ಟಿರುವ ಭದ್ರತಾ ಠೇವಣಿಯನ್ನು ಹಿಂಪಡೆಯುವಂತೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ. ಕಚೇರಿ ವಿಳಾಸ: ಸಹಾಯಕ ನಿರ್ದೇಶಕರ ಕಚೇರಿ, ಪಿಂಚಣಿ, ಸಣ್ಣ ಉಳಿತಾಯ ಮತ್ತು ಆಸ್ತಿ-ಋಣ ನಿರ್ವಹಣೆ ಇಲಾಖೆ,

ಕೊಠಡಿ ಸಂಖ್ಯೆ: 222, 2ನೇ ಮಹಡಿ, ಜಿಲ್ಲಾಡಳಿತ ಭವನ, ಹುಬ್ಬಳ್ಳಿ ರಸ್ತೆ, ಗದಗ. ದೂರವಾಣಿ: 08372-232495 ಈ ಕುರಿತು ಇಲಾಖೆಯ ಸಹಾಯಕ ನಿರ್ದೇಶಕ ಶ್ರೀಧರ ಚಿನಗುಂಡಿ ಮಾಹಿತಿ ನೀಡಿದ್ದಾರೆ.

### ಹಕ್ಕುಪತ್ರವಿದ್ದರೂ ನಿವೇಶನವಿಲ್ಲ । ಜನಪ್ರತಿನಿಧಿಗಳಿಗೆ ಮನವಿ ಸಲ್ಲಿಸಿ, ಗೋಗರೆದರೂ ಇಲ್ಲ ಸ್ಪಂದನೆ

# ಆಶ್ರಯ ಫಲಾನುಭವಿಗಳಿಂದ ಪುರಸಭೆಯೆದುರು ಧರಣಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಆಶ್ರಯ ನಿವೇಶನದ ಹಕ್ಕಪತ್ರ ನೀಡಿ 8 ವರ್ಷ ಕಳೆದರೂ ನಿವೇಶನ ಗುರುತಿಸಿಕೊಟ್ಟಿಲ್ಲ, ನಿವೇಶನಕ್ಕೆ ಸಂಪರ್ಕ ರಸ್ತೆಯೂ ಇಲ್ಲ. ನಿವೇಶನದಲ್ಲಿ ಯಾವುದೇ ಮೂಲಭೂತ ಸೌಲಭ್ಯವೂ ಇಲ್ಲ. ಈ ಬಗ್ಗೆ ನಿತ್ಯ ಪುರಸಭೆಗೆ, ಜನಪ್ರತಿನಿಧಿಗಳಿಗೆ ಮನವಿ ಸಲ್ಲಿಸಿ, ಗೋಗರೆದರೂ ಯಾರೊಬ್ಬರೂ ಸ್ಪಂದಿಸದ್ದರಿಂದ ಅ ಸ ವ್ ಾ ಧ ಾ ನ ಗ ೊ ಂ ಡ ಫಲಾನುಭವಿಗಳು, ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಸಂಘಟನೆಯವರು ಸೋಮವಾರ ಪುರಸಭೆಯ ಮುಂದೆ ಅನಿರ್ದಿಷ್ಟಾವಧಿ ಧರಣಿ ಸತ್ಯಾಗ್ರಹ ನಡೆಸಿದರು.

ಈ ವೇಳೆ ಮಾತನಾಡಿದ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಅಭಿಮಾನಿ ಬಳಗದ ಜಿಲ್ಲಾಧ್ಯಕ್ಷ ಬಸವರಾಜ ಹಿರೇಮನಿ, ರಸ್ತೆ ಸಂಪರ್ಕ ಇಲ್ಲದ ಭೂಮಿ ಖರೀದಿಸಿ 2018ರಲ್ಲಿ ಹಕ್ಕುಪತ್ರ ವಿತರಣೆ ಮಾಡಿದ್ದರೂ ಇಲ್ಲಿವರೆಗೂ ಫಲಾನುಭವಿಗಳಿಗೆ ನಿವೇಶನ ಗುರುತಿಸಿಕೊಟ್ಟಿಲ್ಲ. ಅಲ್ಲಿ ಯಾವುದೇ ಸೌಲಭ್ಯವೂ ಇಲ್ಲ. ಹಕ್ಕುಪತ್ರ ಕೊಡುವ ವೇಳೆ ಪ್ರತಿ ಪಲಾನುಭವಿಗಳಿಂದ ನಿವೇಶನದ ಅಭಿವೃದ್ಧಿಗಾಗಿ 2 ಸಾವಿರ ರೂ ಹಣ ತೆಗೆದು-ಕೊಂಡಿದ್ದಾರೆ. ಸಂಗ್ರಹವಾದ 9 ಲಕ್ಷದಲ್ಲಿ ಕಚ್ಚಾ ರಸ್ತೆ, ಚರಂಡಿ ನಿರ್ಮಾಣ ಮಾಡಲಾಗಿದೆ ಎಂದು ಹೇಳುತ್ತಾರೆ. ಆದರೆ ಮೇಲ್ನೋಟಕ್ಕೆ ಇದರಲ್ಲಿಯೂ ಹಣದ ದುರುಪಯೋಗವಾಗಿದೆ ಎಂದು ಆರೋಪಿಸಿದರು.

ರಸ್ತೆ ಸಂಪರ್ಕಕ್ಕೆ 9 ಗುಂಟೆ ಭೂಮಿ ಕೊಡಲು ಸಾರ್ವಜನಿಕರೋರ್ವರು ಸಿದ್ಧರಿದ್ದರೂ ಖರೀದಿಸಲು 2/3 ಲಕ್ಷ ರೂ ಸಾಮಾನ್ಯನಿಧಿ ಪುರಸಭೆಯಲ್ಲಿ ಇಲ್ಲವೋ ಅಥವಾ ಇವರಿಗೆ ಬಡವರ ಕಷ್ಟಕ್ಕೆ ಸ್ಪಂದಿಸುವ ಮನಸ್ಥಿತಿ ಇಲ್ಲವೋ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಸುಡು ಬಿಸಿಲಿನಲ್ಲಿಯೇ ಫಲಾನುಭವಿಗಳು ಚಿಕ್ಕ ಮಕ್ಕಳೊಂದಿಗೆ ಧರಣಿ ನಡೆಸಿದರು. ಸಂಜೆ ವೇಳೆಗೆ ಧರಣಿ ನಿರತರನ್ನು ಸಮಾಧಾನಪಡಿಸಿದ ಪುರಸಭೆ ಮುಖ್ಯಾಧಿಕಾರಿ ಮಾಂತೇಶ ಬೀಳಗಿ, ಆಡಳಿತಾಧಿಕಾರಿಗಳ ನಿರ್ದೇಶನದಂತೆ ನಿವೇಶನಕ್ಕೆ ಸಂಪರ್ಕ ಕಲ್ಪಿಸಲು ಜಮೀನು ಖರೀದಿ, ನಿವೇಶನ ಗುರುತಿಸಿಕೊಡುವ ಕಾರ್ಯವನ್ನೂ ಕೂಡಲೇ ಮಾಡಲಾಗುವುದು. ಫೆ. 6ರಂದು ಆಶ್ರಯ ಸಮಿತಿ ಅಧ್ಯಕ್ಷರಾದ ಶಾಸಕ ಡಾ. ಚಂದ್ರು ಲಮಾಣಿ ಅವರ ಅಧ್ಯಕ್ಷತೆಯಲ್ಲಿ ಸಭೆ ಮಾಡಿ ಆಶ್ರಯ ನಿವೇಶನದಲ್ಲಿ ನೀರು, ವಿದ್ಯುತ್, ರಸ್ತೆ, ಚರಂಡಿ ಸೇರಿ ಮೂಲಭೂತ ಸೌಲಭ್ಯಕ್ಕಾಗಿ 5,07,65,000 ರೂಗಳ ಅಂದಾಜು ಪತ್ರಿಕೆಯೊಂದಿಗೆ ಅನುದಾನಕ್ಕಾಗಿ ರಾಜೀವ ಗಾಂಧಿ ನಿಗಮಕ್ಕೆ ಜಿಲ್ಲಾಧಿಕಾರಿಗಳಿಗೆ ವರದಿ ಸಲ್ಲಿಸಲಾಗಿದೆ. ಅನುದಾನ ಬಿಡುಗಡೆ ಆಗುತ್ತಿದ್ದಂತೆಯೇ ಕಾಮಗಾರಿ ಕೈಗೊಳ್ಳಲಾಗುವುದು. ದಯವಿಟ್ಟು ಇನ್ನಷ್ಟು ಕಾಲಾವಕಾಶ ಕೊಡಿ ಎಂದು ಮನವಿ ಮಾಡಿದರು. ಮನವಿಗೆ ಸ್ಪಂದಿಸಿದ ಫಲಾನುಭವಿಗಳು ತಾತ್ಕಾಲಿಕವಾಗಿ ಧರಣಿ ಹಿಂಪಡೆಯುವುದಾಗಿ ಹೇಳಿದರು. ಸಿಪಿಐ ಬಿ.ವಿ. ನ್ಯಾಮಗೌಡ್ರ, ಪಿಎಸ್‌ಐ ನಾಗರಾಜ ಗಡಾದ ಸ್ಥಳದಲ್ಲಿದ್ದು ಪರಿಸ್ಥಿತಿ ನಿಭಾಯಿಸಿದರು.

ಈ ವೇಳೆ ಸಂಘಟನೆಯ ಸುರೇಶ ಹಟ್ಟಿ, ಪ್ರಕಾಶ ಕೊಂಚಿಗೇರಿಮಠ, ಸುರೇಶ ಮಿಸ್ಕಿನ್, ಇಲಿಯಾಸಅಲಿ ಮೀರಾನವರ, ಮಂಜಪ್ಪ ಶಿರಹಟ್ಟಿ, ಮಹಾಂತೇ ಗುದ್ನಾಳ, ರೇವತಿ ಕಟ್ಟಿಮನಿ, ನಜೀರ ನದಾಫ್, ಸೋಮಯ್ಯ ಕಲಕೇರಿಮಠ, ಶಿವಪ್ಪ ಭಗೀರಕಾರ, ಯಾಸ್ಮಿನಭಾನು ಪೀರಜಾಧೆ, ಪಾತಿಮಾ ಕಾಗದಗಾರ, ಶೋಭಾ ಕಮತದ, ರೇಣುಕಾ ಮುದಕವಿ ಸೇರಿ ಅನೇಕ ಮಹಿಳೆಯರು ಇದ್ದರು.

ಧರಣಿ ನಿರತ ಮಹಿಳೆಯರು ಮಾತನಾಡಿ, ಕಳೆದ 8 ವರ್ಷದಿಂದ ಅನೇಕ ಜನಪ್ರತಿನಿಧಿಗಳು, ಅಧಿಕಾರಿಗಳ ಕಾಲು ಹಿಡಿದು ಅಂಗಲಾಚಿ ಬೇಡಿಕೊಂಡಿದ್ದೇವೆ. ಪುರಸಭೆಗೆ ಅಲೆದು ಸುಸ್ತಾಗಿದ್ದೇವೆ. ನಿವೇಶನ ಜಾಗಕ್ಕೆ ಟ್ಯಾಕ್ಸ್ ಕಟ್ಟುತ್ತಾ ಬಂದಿದ್ದೇವೆ. ಸ್ವಂತ ಸೂರಿನ ಕನಸು ಹೊತ್ತ ನಮ್ಮಂತಹ ನೂರಾರು ಗುಡಿಸಲು ವಾಸಿ, ಬಾಡಿಗೆ ನಿವಾಸಿಗಳ ಗೋಳು ಕೇಳುವವರಾರೂ ಇಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

### 38 ಕೋಟಿ ರೂಗಳ ವೆಚ್ಚದಲ್ಲಿ ಕಾರ್ಮಿಕರ ಮಕ್ಕಳಿಗೆ ವಸತಿ ನಿಲಯ ಶೀಘ್ರ ನಿರ್ಮಾಣ; ಶಾಸಕ ಜಿ.ಎಸ್. ಪಾಟೀಲ

# ಅಮೃತ ಯೋಜನೆಯಿಂದ ನೀರಿನ ಸಮಸ್ಯೆ ನಿವಾರಣೆ



■ವಿಜಯಸಾಕ್ಷಿ ಸುದ್ದಿ, ರೋಣ

ಪಟ್ಟಣದಲ್ಲಿ ಅತಿ ಶೀಘ್ರದಲ್ಲಿಫಿ 38 ಕೋಟಿ ರೂಗಳ ವೆಚ್ಚದಲ್ಲಿ ಕಾರ್ಮಿಕರ ಮಕ್ಕಳಿಗೆ ವಸತಿ ನಿಲಯದ ಕಟ್ಟಡ ನಿರ್ಮಾಣ ಕಾರ್ಯಕ್ಕೆ ಚಾಲನೆ ನೀಡಲಾಗುವುದು ಎಂದು ರಾಜ್ಯ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷರು, ಶಾಸಕರಾದ ಜಿ.ಎಸ್. ಪಾಟೀಲ ಹೇಳಿದರು.

ಅವರು ಶನಿವಾರ ಪಟ್ಟಣದ ವೀರಭದ್ರೇಶ್ವರ ದೇವಸ್ಥಾನದ ಬಳಿ 15ನೇ ಹಣಕಾಸು ಯೋಜನೆಯಡಿ 50.40 ಲಕ್ಷ ರೂಗಳ ವೆಚ್ಚದಲ್ಲಿ ಆರ್‌ಸಿಸಿ ಚರಂಡಿ ನಿರ್ಮಾಣ ಕಾರ್ಯಕ್ಕೆ ಭೂಮಿಪೂಜೆಯನ್ನು ನೆರವೇರಿಸಿ ಮಾತನಾಡಿದರು.

ಪಟ್ಟಣದ ನಾಗರಿಕ ಸಮುದಾಯದ ಹಿತದೃಷ್ಟಿಯಿಂದ ಅಮೃತ ಯೋಜನೆಯನ್ನು ತರಲಾಗಿದ್ದು, ಕಾಮಗಾರಿ ಕೂಡ ಭರದಿಂದ ಸಾಗಿದೆ. ಅಮೃತ ಯೋಜನೆಯಿಂದ ನೀರಿನ ಸಮಸ್ಯೆ ತಗ್ಗಲಿದೆ. ಅಲ್ಪಸಂಖ್ಯಾತರ ವಸತಿ ಶಾಲೆಗೆ 10 ಕೋಟಿ ರೂಗಳ ಅನುದಾನ ಬಿಡುಗಡೆಗೊಂಡಿ-ದ್ದು, ಕಾಮಗಾರಿಗೆ ಚಾಲನೆ ನೀಡಲಾಗುವುದು. ಪಟ್ಟಣದ ಹೃದಯ ಭಾಗದಲ್ಲಿರು ಶಾನಭೋಗರ ಕೆರೆ ಅಭಿವೃದ್ಧಿಗಾಗಿ 1 ಕೋಟಿ ರೂಗಳ ಅನುದಾನವನ್ನು ತರಲಾಗಿದೆ ಎಂದರು.

ಪಟ್ಟಣ ಪ್ರದೇಶಗಳು ಮಾತ್ರವಲ್ಲದೆ ಗ್ರಾಮೀಣ ಭಾಗಗಳಲ್ಲಿಯೂ ಕೋಟ್ಯಾಂತರ ರೂಗಳ ವೆಚ್ಚದಲ್ಲಿ ಅಭಿವೃದ್ಧಿ ಕಾರ್ಯಗಳು ಸಾಗಿವೆ. ಸರಕಾರ ಐದು ಗ್ಯಾರಂಟಿ ಯೋಜನೆಗಳನ್ನು ಸಾರ್ವಜನಿಕರಿಗೆ ತಲುಪಿಸುವ ಜೊತೆಗೆ ಅಭಿವೃದ್ಧಿ ಕಾರ್ಯಗಳಿಗೂ ಅನುದಾನವನ್ನು ಒದಗಿಸುತ್ತಿದೆ ಎಂಬುದನ್ನು ನಾಗರಿಕ ಸಮಾಜ ಮರೆಯಬಾರದು ಎಂದರು.

ಗ್ಯಾರಂಟಿ ಸಮಿತಿ ಅಧ್ಯಕ್ಷ ಸಂಗನಗೌಡ ಪಾಟೀಲ, ವಿ.ಆರ್. ಗುಡಿಸಾಗರ, ಮುತ್ತಣ್ಣ ಸಂಗಳದ, ತೋಟಪ್ಪ ನವಲಗುಂದ, ಬಾವಾಸಾಬ ಬೆಟಗೇರಿ, ಬಸವರಾಜ ನವಲಗುಂದ, ವಿ.ಬಿ. ಸೋಮನಕಟ್ಟಿಮಠ, ಯೂಸುಫ್ ಇಟಗಿ, ಪರಶುರಾಮ ಅಳಗವಾಡಿ, ದುರ್ಗಪ್ಪ ಹಿರೇಮನಿ, ದಾವಲಸಾಬ ಬಾಡಿನ, ಸಂಜಯ ದೊಡ್ಡಮನಿ, ಮಲಿಕ ಯಲಿಗಾರ, ಅಸ್ಲಂ ಕೊಪ್ಪಳ, ರಂಗವ್ವ ಭಜಂತ್ರಿ, ಮುಖ್ಯಾಧಿಕಾರಿ ರಮೇಶ ಹೊಸಮನಿ ಮುಂತಾದವರು ಉಪಸ್ಥಿತರಿದ್ದರು.

ರೈತರ ಹಿತವನ್ನು ಗಮನದಲ್ಲಿಟ್ಟುಕೊಂಡು ಕೋಲ್ಡ್ ಸ್ಟೋರೇಜ್‌ನ್ನು ಪಟ್ಟಣಕ್ಕೆ ತರಲಾಗಿದ್ದು, ಈ ಯೋಜನೆಯಿಂದ ರೈತರಿಗೆ ಲಾಭವಾಗಲಿದೆ. ಪಟ್ಟಣದ ಎಲ್ಲ ವಾರ್ಡ್‌ಗಳ ಪ್ರಗತಿಗಾಗಿ ಸಾಕಷ್ಟು ಅನುದಾನವನ್ನು ಒದಗಿಸಲಾಗಿದ್ದು, ಸಿಸಿ ರಸ್ತೆ ಕಾಮಗಾರಿಗಳು ಸಹ ನಡೆಯುತ್ತಿವೆ. ಮುಖ್ಯವಾಗಿ 20 ಕೋಟಿ ರೂಗಳ ವೆಚ್ಚದಲ್ಲಿ ರಸ್ತೆಗಳ ಅಭಿವೃದ್ಧಿ ಕಾರ್ಯಗಳು ಸಹ ಪ್ರಗತಿಯತ್ತ ಸಾಗಿದ್ದು, ಇನ್ನೂ ಅನೇಕ ಮಹತ್ವಾಕಾಂಕ್ಷಿ ಯೋಜನೆಗಳು ರೋಣ ಪಟ್ಟಣಕ್ಕೆ ಬರಲಿವೆ ಎಂದು ಶಾಸಕ ಜಿ.ಎಸ್. ಪಾಟೀಲ ತಿಳಿಸಿದರು.

# ಹಾನಗಲ್ : ನಾಡ ಬಾಂಬ್ ಸ್ಫೋಟ - ಎರಡು ಹೋರಿಗಳು ಸಾವು

■ವಿಜಯಸಾಕ್ಷಿ ಸುದ್ದಿ, ಹಾನಗಲ್

ಕಾಡು ಪ್ರಾಣಿಗಳನ್ನು ಬೇಟೆಯಾಡುವ ಉದ್ದೇಶದಿಂದ ಕಿಡಿಗೇಡಿಗಳು ಅಕ್ರಮವಾಗಿ ಇಟ್ಟಿದ್ದ ನಾಡ ಬಾಂಬ್ ಸ್ಫೋಟಗೊಂಡ ಪರಿಣಾಮ ಎರಡು ಹೋರಿಗಳು ಮೃತಪಟ್ಟಿರುವ ದುರ್ಘಟನೆ ಹಾವೇರಿ ಜಿಲ್ಲೆಯ ಹಾನಗಲ್ ತಾಲೂಕಿನ ಹೀರೂರು ಗ್ರಾಮದಲ್ಲಿ ನಡೆದಿದೆ.

ಗ್ರಾಮದ ಹೊರವಲಯದ ಸಿಗಿಗುಂಡಿ ಪ್ರದೇಶದ ಕಾಡಿನಲ್ಲಿ, ವನ್ಯಜೀವಿಗಳಿಗೆ ನೀರು ಕುಡಿಯುವ ಉದ್ದೇಶದಿಂದ ತೋಡಿದ್ದ ನೀರಿನ ಗುಂಡಿಯ ಬಳಿ ನಾಡ ಬಾಂಬ್ ಇಡಲಾಗಿತ್ತು. ನೀರು ಕುಡಿಯಲು ತೆರಳಿದ್ದ ಎರಡು ಹೋರಿಗಳು ಬಾಂಬ್‌ನ್ನು ಕಚ್ಚಿದ ಪರಿಣಾಮ ಭಾರೀ ಸ್ಫೋಟ ಸಂಭವಿಸಿದೆ.

## ಪುರಸಭೆ ಕಾರ್ಯಾಲಯ, ರೋಣ 582209

ಜಿಲ್ಲಾ: ಗದಗ ದೂ: 08381-267234 ರಾಜ್ಯ: ಕರ್ನಾಟಕ

Email: itstaff_ulb_ron@yahoo.in

Website: www.ronatown.rc.gov.in

ಕ್ರ.ಸಂ/ಪುಸರೋ/ಹರಾಜು/ ವಹಿ/ /2025-26 ದಿನಾಂಕ: 09-02-2026

**ಹರಾಜು ಪ್ರಕಟಣೆ**

ಈ ಮೂಲಕ ರೋಣ ಪಟ್ಟಣದ ಸಾರ್ವಜನಿಕರಿಗೆ/ಅರೇ ಸರಕಾರಿ ಸಂಸ್ಥೆಯುವರಿಗೆ ತಿಳಿಯುಪಡಿಸುವುದೇನೆಂದರೆ, ರೋಣ ಪುರಸಭೆ ಕಾರ್ಯಾಲಯದ ಅಧೀನದ ವಿವಿಧ ವಾರ್ಡನಲ್ಲಿರುವ **ಶುದ್ಧ ಕುಡಿಯುವ ನೀರಿನ ಘಟಕ (ಆರ್. ಓ. ಪ್ಲಾಂಟ್) ನ್ನು ವಾರ್ಷಿಕವಾಗಿ ನಿರ್ವಹಣೆ** ಮಾಡುವ ಕುರಿತು ಬಹಿರಂಗ ಹರಾಜನ್ನು ರೋಣ ಪುರಸಭೆ ಕಾರ್ಯಾಲಯದಲ್ಲಿ **ದಿನಾಂಕ: 16-02-2026 ರಂದು ಮದ್ಯಾಹ್ನ 03.00 ಗಂಟೆಗೆ** ಕರೆಯಲಾಗಿದ್ದು ಆಸಕ್ತಿಯುಳ್ಳವರು ಈ ಬಹಿರಂಗ ಹರಾಜಿನಲ್ಲಿ ಭಾಗವಹಿಸಬಹುದು.

1. ಈ ಬಹಿರಂಗ ಹರಾಜಿನಲ್ಲಿ ಭಾಗವಹಿಸಲು ಆಸಕ್ತಿಯುಳ್ಳವರು ಠೇವಣಿ ಮೊತ್ತ **ರೂ. 100000/- ಗಳನ್ನು (ಒಂದು ಲಕ್ಷ)** ಠೇವಣಿ ಇಟ್ಟು ಪ್ರವೇಶ ಪತ್ರ ಪಡೆದು ಭಾಗವಹಿಸತಕ್ಕದ್ದು. ಈ ರೀತಿ ಠೇವಣಿ/ಸುಂಕ ಇಟ್ಟು ಬಹಿರಂಗ ಹರಾಜಿನಲ್ಲಿ ಭಾಗವಹಿಸುವವರು. ವಾರ್ಷಿಕ ನಿರ್ವಹಣೆ ಪಡೆದರೆ ಈ ಹಣವನ್ನು ಠೇವಣಿಯುಂದು ಪರಿಗಣಿಸಲಾಗುವುದು. ಹಾಗೂ ಈ ನಿರ್ವಹಣೆ ಮುಗಿಯುವವರೆಗೆ ಠೇವಣಿ ರೂಪದಲ್ಲಿ ಇಟ್ಟುಕೊಳ್ಳಲಾಗುವುದು. ಇದಕ್ಕೆ ಯಾವುದೇ ರೀತಿಯ ಬಡ್ಡಿ ನೀಡಲಾಗುವುದಿಲ್ಲ. ಸದರಿ ಠೇವಣಿ ಮೊತ್ತವನ್ನು ಡಿ.ಡಿ. ರೂಪದಲ್ಲಿ ಮುಖ್ಯಾಧಿಕಾರಿಗಳ ಹೆಸರಿನಲ್ಲಿ ಪಡೆದು ಕಛೇರಿಗೆ ಸಲ್ಲಿಸತಕ್ಕದ್ದು.
2. ಲೀಲಾವ ಅವಧಿ **ದಿನಾಂಕ : 17-02-2026 ರಿಂದ 17-02-2028** ರವರೆಗೆ ಮಾತ್ರ ಇರುತ್ತದೆ.
3. ಭಾಗವಹಿಸುವ ಅರ್ಜಿದಾರರು ನಿಗದಿಪಡಿಸಿರುವ **ದಿನಾಂಕ : 13-02-2026** ರ ಒಳಗಾಗಿ ಕಛೇರಿ ವೇಳೆಯಲ್ಲಿ ಅರ್ಜಿಯೊಂದಿಗೆ ಡಿ.ಡಿ./ಮೊತ್ತ ಲಗತ್ತಿಸಿ ಕಛೇರಿಗೆ ಸಲ್ಲಿಸತಕ್ಕದ್ದು. ಅವಧಿ ಮೀರಿ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಅಲ್ಲದೇ ಡಿ.ಡಿ./ಮೊತ್ತ ಸಲ್ಲಿಸಿದವರು ಮಾತ್ರ ಹರಾಜಿನಲ್ಲಿ ಭಾಗವಹಿಸಲು ಅವಕಾಶ ವಿರುತ್ತದೆ.
4. ಸದರಿ ಡಿ.ಡಿ.ಗಳನ್ನು ಸಲ್ಲಿಸಲು **ದಿನಾಂಕ : 13-02-2026** ಅಂತಿಮವಾಗಿರುತ್ತದೆ. (ಕಛೇರಿ ವೇಳೆಯೊಳಗಾಗಿ)
5. ಹರಾಜಿನಲ್ಲಿ ಭಾಗವಹಿಸುವವರು ಒಂದೊಂದು ಆರ್.ಓ. ಪ್ಲಾಂಟ್‌ಗೆ ಪ್ರತ್ಯೇಕ ಡಿ.ಡಿ. ಸಲ್ಲಿಸತಕ್ಕದ್ದು. ಪ್ರತ್ಯೇಕ ಅರ್ಜಿ ಶುಲ್ಕ ಪಾವತಿಸತಕ್ಕದ್ದು.
6. ಬಹಿರಂಗ ಹರಾಜಿನಲ್ಲಿ ಸರ್ಕಾರದ ದರಕ್ಕಿಂತ ಹೆಚ್ಚಿಗೆ ಕೂಗಿದಲ್ಲಿ ಮಾತ್ರ ಪರಿಗಣಿಸಲಾಗುವುದು. ಯಾವುದೇ ವಿವಾದಾತ್ಮಕ ಪ್ರಸಂಗದಲ್ಲಿ ಹರಾಜನ್ನು ಮುಂದುವರೆಸುವ ಅಥವಾ ತಿರಸ್ಕರಿಸುವ ಅಂತಿಮ ತೀರ್ಮಾನವನ್ನು ಪುರಸಭೆ ರೋಣ ಇವರು ಕಾಯ್ದಿರಿಸಿಕೊಂಡಿರುತ್ತಾರೆ.
7. ಬಹಿರಂಗ ಹರಾಜು ಮೂಲಕ ನಿರ್ವಹಣೆ ಪಡೆದವರು ಹರಾಜಿನ ಸಂಪೂರ್ಣ ಮೊತ್ತವನ್ನು ಕಾರ್ಯಾಲಯಕ್ಕೆ ಪಾವತಿಸಿದ ನಂತರ ನಿರ್ವಹಣೆ ಮಾಡತಕ್ಕದ್ದು.
8. ಅವಶ್ಯ ಬಿದ್ದರೆ ಲೀಲಾವನ್ನು ರದ್ದುಪಡಿಸಿ ಹೊಸದಾಗಿ ಲೀಲಾವು ಮಾಡಲಾಗುವುದು.
9. ಲೀಲಾವುದಾರನು ತನಗೆ ಲೀಲಾವು ಮುಗಿದ ಪ್ರಕಾರ **ರೂ.100/-** ಛಾಫಾ ಕಾಗದ ಪತ್ರದಲ್ಲಿ ಪುರಸಭೆ ಕರಾರುಗಳಿಗೆ ಒಪ್ಪಿ ಬರೆದು ಸಹಿ ಮಾಡಿ ಕೊಡತಕ್ಕದ್ದು ಮತ್ತು ಆಸ್ತಿಯ ಪಹಣಿ (ನಮೂನೆ-3) ಪತ್ರಿಕೆ ಇಲ್ಲವೇ ಮನೆಯ ಖಾತಾ ಉತಾರವಾಗಲಿ ಲಗತ್ತಿಸತಕ್ಕದ್ದು.
10. ಈ ಬಹಿರಂಗ ಹರಾಜಿನಲ್ಲಿ ನಿರ್ವಹಣೆ ಪಡೆದವರು ಸದರಿ ಘಟಕದ ವಿದ್ಯುತ್ ಶುಲ್ಕ, ನೀರಿನ ಶುಲ್ಕ ಭರಿಸತಕ್ಕದ್ದು ಮತ್ತು ಯಾವುದೇ ಯಂತ್ರಗಳ ದುರಸ್ತಿಗಳನ್ನು ತಾವೇ ಮಾಡಿಕೊಳ್ಳತಕ್ಕದ್ದು.
11. ಪ್ರತಿ 20 ಲೀಟರ ಶುದ್ಧ ಕುಡಿಯುವ ನೀರಿಗೆ ರೂ.5 ಗಳನ್ನು ಪಡೆಯತಕ್ಕದ್ದು.
12. ಸದರಿ ಘಟಕದಿಂದ ಸಾರ್ವಜನಿಕರಿಗೆ ಮಾತ್ರ ನೀರು ಪೂರೈಸತಕ್ಕದ್ದು.
13. ಯಾವುದೇ ರೀತಿಯ ಉಪ ಬಾಡಿಗೆ ಇತ್ಯಾದಿಗಳ ಮುಖಾಂತರ ಬೇರೆಯವರಿಗೆ ನೀಡಬಾರದು. ಈ ನಿಯಮ ಉಲ್ಲಂಘಿಸಿದಲ್ಲಿ ಅಂತವರ ವಿರುದ್ಧ ಸೂಕ್ತ ಕ್ರಮ ಜರುಗಿಸಲಾಗುವುದು.
14. ಘಟಕವನ್ನು ಉತ್ತಮವಾಗಿ ನಿರ್ವಹಣೆ ಮಾಡತಕ್ಕದ್ದು.
15. ಯಾವುದೇ ಕಾರಣಕ್ಕೆ ಠೇವಣಿಯನ್ನು ಹೊಂದಾಣಿಕೆ ಮಾಡಿಕೊಳ್ಳಲಾಗುವುದಿಲ್ಲ. ನಿರ್ವಹಣಾ ಅವಧಿ ಮುಗಿದ ನಂತರ ನೀರು ಶುದ್ಧಿಕರಣ ಘಟಕದ ಕಟ್ಟಡ ಹಾಗೂ ಯಂತ್ರೋಪಕರಣಗಳನ್ನು ಸುಸ್ಥಿತಿಯಲ್ಲಿ ಮರಳಿಸಿದ್ದಲ್ಲಿ ಮಾತ್ರ ಠೇವಣಿ ಮರುಪಾವತಿಸಲಾಗುವುದು.
16. ಹರಾಜಿನ ಅವಧಿ **2 ವರ್ಷ** ಅವಧಿಯವರೆಗೆ ಮಾತ್ರ ಸಿಮಿತ ಇರುತ್ತದೆ. ಅವಧಿ ಮುಗಿದ ನಂತರ ಕಾರಣಾಂತರಗಳಿಂದ ಘಟಕ ಖಾಲಿ ಮಾಡದಿದ್ದಲ್ಲಿ ಬಾಡಿಗೆದಾರರನ್ನು ಅಲ್ಲಿಂದ ದಂಡ ರೂಪದಲ್ಲಿ ಶೇ.30 ರಷ್ಟು ಹೆಚ್ಚುವರಿ ಬಾಡಿಗೆ ಹಣವನ್ನು ಪ್ರತಿ ವರ್ಷಕ್ಕೊಮ್ಮೆ ಆಕರಿಸುವುದು.
17. ಪ್ರತಿ ಅರ್ಜಿದಾರರು ಅರ್ಜಿ ಶುಲ್ಕ **1000/- ರೂ.** ಕಛೇರಿಗೆ ಪಾವತಿಸಿ ಅರ್ಜಿ ಸಂಗಡ ಡಿ.ಡಿ ಲಗತ್ತಿಸಿ ಕಛೇರಿಗೆ ಸಲ್ಲಿಸಿ ಭಾಗವಹಿಸತಕ್ಕದ್ದು.
18. ಪ್ರತಿ ತಿಂಗಳು ಬಾಡಿಗೆಯನ್ನು ತಿಂಗಳ ಕೊನೆಯಲ್ಲಿ ಪುರಸಭೆಗೆ ಸಂದಾಯ ಮಾಡಬೇಕು. ಇಲ್ಲದಿದ್ದರೆ ಒಂದನೇ ತಾರೀಖಿನಿಂದ 100ಕ್ಕೆ ಶೇ.2% ತಿಂಗಳ ದಂಡದೊಂದಿಗೆ ಬಾಡಿಗೆಯನ್ನು ವಸೂಲಿ ಮಾಡಲಾಗುವುದು. ಮತ್ತು ಕಾಯ್ದೆ ಅಡಿಯಲ್ಲಿ ಕ್ರಮ ಕೈಗೊಳ್ಳಲಾಗುವುದು.

**ಸಹಿ/-**
**ಮುಖ್ಯಾಧಿಕಾರಿ**
**ಪುರಸಭೆ, ರೋಣ**

ವಾ.ಸಾ.ಇ./ಗದಗ/638/
ದೇಶಪಾಂಡೆಪಬ್ಲಿಸಿಟಿ/2025-26

**ಸಹಿ/-**
**ಆಡಳಿತಾಧಿಕಾರಿಗಳು**
**ಪುರಸಭೆ, ರೋಣ ಹಾಗೂ**
**ಉಪ ವಿಭಾಗಾಧಿಕಾರಿಗಳು ಗದಗ**

# ಮತದಾರರ ಮ್ಯಾಪಿಂಗ್ ಕಾರ್ಯ ಪರಿಶೀಲನೆ



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಸೋಮವಾರ ಶಿರಹಟ್ಟಿ ತಾಲೂಕಿನ ಬೆಳ್ಳಟ್ಟಿ ಗ್ರಾಮದ ವಾರ್ಡ್ ನಂ. 3 ಮತ್ತು 4ರ ಮಡ್ಡಿಗೇರಿ ಓಣಿ ಮತ್ತು ಉಳ್ಳಾಗಡ್ಡಿ ಓಣಿಯಲ್ಲಿ ಮತದಾರರ ಮ್ಯಾಪಿಂಗ್ ಕಾರ್ಯವನ್ನು ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕಿ ಹಾಗೂ ಶಿರಹಟ್ಟಿ ಮತದಾರರ ನೋಂದಣಾಧಿಕಾರಿ ಡಾ. ನಂದಾ ಹಣಬರಟ್ಟಿ ಮತ್ತು ತಹಸೀಲ್ದಾರ ಕೆ. ರಾಘವೇಂದ್ರ ರಾವು ಪರಿಶೀಲನೆ ನಡೆಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ನಂದಾ ಹಣಬರಟ್ಟಿ, ಮತದಾರರ ಮ್ಯಾಪಿಂಗ್ ಹಾಗೂ ಪ್ರೊಜಿನಿ ಮ್ಯಾಪಿಂಗ್ ಮಾಡುವ ಕೆಲಸ ಪ್ರಗತಿಯಲ್ಲಿದ್ದು, ಎಲ್ಲ ಮತದಾರರು ತಮ್ಮ 2002ರ ಮತದಾರರ ಪಟ್ಟಿಯ ಸಂಖ್ಯೆ, ಕ್ರಮ ಸಂಖ್ಯೆ ಹಾಗೂ ಮದುವೆಯಾಗಿ ಬಂದ ಮಹಿಳೆಯರು ತಮ್ಮ ತಂದೆ-ತಾಯಿ 2002ರಲ್ಲಿ ಇರುವ ಭಾಗದ ಸಂಖ್ಯೆ, ಕ್ರಮ ಸಂಖ್ಯೆಯನ್ನು ತಮ್ಮ ವ್ಯಾಪ್ತಿಯ ಬಿಎಲ್‌ಓ ಅವರಿಗೆ ಅಥವಾ ಗ್ರಾಮ ಆಡಳಿತ ಅಧಿಕಾರಿಗಳಿಗೆ ನೀಡಿ ತಮ್ಮ ಮ್ಯಾಪಿಂಗ್ ಆದ ಬಗ್ಗೆ ಪರಿಶೀಲನೆ ಮಾಡಬೇಕೆಂದು ಹೇಳಿದರು.

# ಮಂಜನಾಥಸ್ವಾಮಿ, ಚೌಡೇಶ್ವರಿದೇವಿ ಜಾತ್ರೆ ಇಂದು

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ತಾಲೂಕಿನ ಬನ್ನಿಕೊಪ್ಪ ಗ್ರಾಮದಲ್ಲಿ ಫೆ. 10ರಂದು ಶ್ರೀ ಮಂಜುನಾಥಸ್ವಾಮಿ, ಶ್ರೀ ಅನ್ನಪೂರ್ಣೇಶ್ವರಿ ದೇವಿ ಜಾತ್ರೆ ಜರುಗಲಿದೆ.

ಮುಂಜಾನೆ 10ಗಂಟೆಗೆ ಶ್ರೀ ಚೌಡೇಶ್ವರಿದೇವಿಗೆ ರುದ್ರಾಭಿಷೇಕ, ಕುಂಕುಮಾರ್ಚನೆ, ಬಿಲ್ವಾರ್ಚನೆ, ಮಹಾಮಂಗಳಾರತಿ ತದನಂತರ ಮಧ್ಯಾಹ್ನ 12 ಗಂಟೆಗೆ ಸಾಮೂಹಿಕ ವಿವಾಹ, ಸಂಜೆ 5 ಗಂಟೆಗೆ ಶ್ರೀ ಮಂಜುನಾಥ ಸ್ವಾಮಿ ಹಾಗೂ ಶ್ರೀ ಚೌಡೇಶ್ವರಿ ದೇವಿಯ ರಥೋತ್ಸವ ಜರುಗಲಿದೆ. ಫೆ.11ರ ಮುಂಜಾನೆ 9 ಗಂಟೆಗೆ ದೀರ್ಘದಂಡ ನಮಸ್ಕಾರ ಕಾರ್ಯಕ್ರಮ ಹಾಗೂ ಸಂಜೆ 4 ಗಂಟೆಗೆ ಕಡುಬಿನ ಕಾಳಗ ನಡೆಯಲಿದೆ ಎಂದು ಟ್ರಸ್ಟ್ ಕಮಿಟಿ ಪ್ರಕಟಣೆಯಲ್ಲಿ ತಿಳಿಸಿದೆ.

### ಗದಗ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿಯಿಂದ ದಿ. ಕೆ.ಎಚ್. ಪಾಟೀಲರ ಪುಣ್ಯತಿಥಿ ಆಚರಣೆ

# ಕೆ.ಎಚ್. ಪಾಟೀಲರ ರಾಜಕಾರಣ ಯುವಕರಿಗೆ ಆದರ್ಶ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ದಿ. ಕೆ.ಎಚ್. ಪಾಟೀಲ ವೃತ್ತದಲ್ಲಿ ಗದಗ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ವತಿಯಿಂದ ಸಹಕಾರಿ ರಂಗದ ಭೀಷ್ಮ ಕೆ.ಎಚ್. ಪಾಟೀಲ ಅವರ ಪುಣ್ಯತಿಥಿಯನ್ನು ಸೋಮವಾರ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರು ಅಕ್ಬರಸಾಬ ಬಬರ್ಚಿ, ಜಿ.ಪಂ ಮಾಜಿ ಅಧ್ಯಕ್ಷೆ ಸುಜಾತಾ ದೊಡ್ಡಮನಿ, ನಗರಸಭೆ ಮಾಜಿ ಅಧ್ಯಕ್ಷೆ ರುದ್ರಮ್ಮ ಕೆರಕಲಮಟ್ಟಿ, ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿ ಪರಿಶಿಷ್ಟ ಜಾತಿ ವಿಭಾಗದ ಅಧ್ಯಕ್ಷ ಬಸವರಾಜ ಕಡೆಮನಿ, ತಾ.ಪಂ ಮಾಜಿ ಅಧ್ಯಕ್ಷ ವಿದ್ಯಾಧರ ದೊಡ್ಡಮನಿ, ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿ ಅಲ್ಪಸಂಖ್ಯಾತರ ವಿಭಾಗದ ಅಧ್ಯಕ್ಷ ಉಮರಫಾರೂಖ್ ಹುಬ್ಬಳ್ಳಿ, ಗದಗ ಜಿಲ್ಲಾ ಕೆಡಿಪಿ ಸಮಿತಿ ಸಭೆಯ ಸದಸ್ಯರಾದ ಎಸ್.ಎನ್. ಬಳ್ಳಾರಿ, ಮುಖಂಡರಾದ ವೀಣಾ ಕಟ್ನಳ್ಳಿ, ಶಾರೂಖ್ ಹುಯಿಲಗೋಳ, ಶಹಬಾಜ್ ಮುಲ್ಲಾ, ಶಂಭು ಕಾಳೆ, ಮಹಮ್ಮದ್ ಶಾಲಗಾರ, ಸರ್ಫರಾಜ್ ಬಬರ್ಚಿ, ವಿನಾಯಕ ಬಳ್ಳಾರಿ, ಸೈಯದ್‌ಖಾಲಿದ ಕೊಪ್ಪಳ, ಅನ್ವರ ನದಾಫ್, ಮಹಾಂತೇಶ ಮಡಿವಾಳರ, ಪರಪ್ಪ ಕಮತರ, ಕಮಲಾಕ್ಷಿ ಹಾದಿಮನಿ, ಯಲ್ಲಮ್ಮ ಜಡಿ, ದ್ರಾಕ್ಷಾಯಣಿ ಹಾಸಿಲ್ಕರ್, ಪೂಜಾ ಬೇವೂರ, ಮರಿಯಪ್ಪ ಸಣ್ಣತಂಗಿಯವರ, ಮಹೇಶ ಪಟ್ಟಣಶೆಟ್ಟಿ, ಜಾಕೀರ ಕುನ್ನಿಬಾವಿ, ಪರಮೇಶಪ್ಪ ಜಂತ್ಲಿ, ಕರಬಸಯ್ಯ ನಾಲ್ವಾಡಮಠ, ಮಲಿಕ್ ಸಂಗಾಪೂರ, ಉ ವ್ ಾ ರ್ ಷ ಾ ರ್ ೂ ಖ್ ಬಾರಿಗಿಡದ, ಅಭಿಷೇಕ, ಶಿವು ಹಾದಿಮನಿ, ಸಂತೋಷ ರಾಮೇನಹಳ್ಳಿ, ಮಹಮ್ಮದ್ ಬೆಟಗೇರಿ, ಅಜ್ಜಪ್ಪ ವಗ್ಗನ್ನವರ, ವಿರುಪಾಕ್ಷ ನಂದೆಣ್ಣವರ, ಅಹ್ಮದ್ ಖಾಜಿ, ಹುಸೇನ್ ಓಲೇಕಾರ, ಅನ್ವರ ಶಿರಹಟ್ಟಿ, ಕಾಂಗ್ರೆಸ್ ಮುಖಂಡರು, ಕೆ.ಎಚ್. ಪಾಟೀಲ ಅಭಿಮಾನಿಗಳು ಹಾಗೂ ಕಾಂಗ್ರೆಸ್ ಕಾರ್ಯಕರ್ತರು ಹಾಜರಿದ್ದರು.

ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ ಕೆ.ಎಚ್. ಪಾಟೀಲರ ಪುತ್ಥಳಿಗೆ ಮಾಲಾರ್ಪಣೆ ಮಾಡಿ ಮಾತನಾಡಿ, ಕೆ.ಎಚ್. ಪಾಟೀಲರು ರೈತರ ಬಗ್ಗೆ ವಿಶೇಷ ಕಾಳಜಿ ಹೊಂದಿದ್ದರು. ಹಲವು ಖಾತೆಗಳನ್ನು ನಿಭಾಯಿಸಿದ್ದ ಅವರು, ನೇರ ಹಾಗೂ ನಿಷ್ಠುರತೆಯಿಂದ ಗುರುತಿಸಿಕೊಂಡಿದ್ದರು. ಪ್ರತಿಯೊಬ್ಬರೂ ಕೆ.ಎಚ್. ಪಾಟೀಲರ ಆದರ್ಶವನ್ನು ಅಳವಡಿಸಿಕೊಂಡು ಮುನ್ನಡೆದರೆ ಯಶಸ್ವಿ ಹಾಗೂ ಮಾದರಿ ರಾಜಕಾರಣಿಯಾಗಲು ಸಾಧ್ಯ ಎಂದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka